ಸಂಪುಟ : 11 ಸಂಚಿಕೆ: 41 ಪುಟ : 4+2 ಬೆಲೆ: 3.00 ಶನಿವಾರ ಮಾರ್ಚ್ 14 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 41 Pages : 4+2 Price : 3.00 Saturday March 14 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಕೆ.ಎಚ್. ಪಾಟೀಲ ಸ್ಮರಣಾರ್ಥ ದತ್ತಿ ಉಪನ್ಯಾಸ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ (ಕಸಾಪ) ವತಿಯಿಂದ ಸಹಕಾರಿ ರಂಗದ ಭೀಷ್ಮ ಎಂದೇ ಖ್ಯಾತರಾದ ಕೆ.ಎಚ್. ಪಾಟೀಲರ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಮಾ.14ರಂದು ಸಂಜೆ 6.30ಕ್ಕೆ ಗದಗದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿರುವ ಕಸಾಪ ಕಾರ್ಯಾಲಯದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ "ಸಾಮಾಜಿಕ ಕ್ಷೇತ್ರಕ್ಕೆ ಕೆ.ಎಚ್. ಪಾಟೀಲರ ಕೊಡುಗೆ" ವಿಷಯದ ಕುರಿತು ಮುಳಗುಂದದ ಆರ್.ಎನ್. ದೇಶಪಾಂಡೆ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ರಮೇಶ ಎಂ. ಕಲ್ಲನಗೌಡರ ಅವರು ಉಪನ್ಯಾಸ ನೀಡಲಿದ್ದಾರೆ.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ಅವರು ಕಾರ್ಯಕ್ರಮದ



ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಬಿ.ಬಿ. ಅಸೂಟಿ, ಯುವ ಮುಖಂಡರಾದ ಕೃಷ್ಣಗೌಡ ಎಚ್. ಪಾಟೀಲ ಹಾಗೂ ಸಂಸ್ಕೃತಿ ಚಿಂತಕರಾದ ವಿದ್ಯಾಧರ ದೊಡಮನಿ ಭಾಗವಹಿಸಲಿದ್ದಾರೆ.

ಇದೇ ವೇಳೆ ಬಸವರಾಜ ನೆಲಜೇರಿ, ಶಕುಂತಲಾ ಸಿಂಧೂರ ಮತ್ತು ಡಾ. ಬಿ.ಎಸ್. ರಾಠೋಡ ಅವರು ಕವನ ವಾಚನ ಮಾಡಲಿದ್ದಾರೆ.

### ಧಾರವಾಡದಲ್ಲಿ ಸಿಲಿಂಡರ್ ಅಕ್ರಮ ಮಾರಾಟ ಮತ್ತು ವಾಣಿಜ್ಯ ಬಳಕೆ ಕಂಡುಬಂದರೆ ಕಾನೂನು ಕ್ರಮ–ಜಿಲ್ಲಾಧಿಕಾರಿ ಸ್ನೇಹಲ್

# ಸಿಲಿಂಡರ್ ಕಾಳಸಂತೆ ವ್ಯವಹಾರಕ್ಕೆ ಕಡಿವಾಣ!

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಗೃಹಬಳಕೆಯ ಗ್ರಾಹಕರಿಗೆ ಎಲ್‌ಪಿಜಿ ಸಿಲಿಂಡರ್‌ಗಳನ್ನು ಸರ್ಕಾರದ ನಿಯಮಾನುಸಾರ ವಿತರಿಸಲಾಗುತ್ತಿದೆ. ನಗರ ಪ್ರದೇಶದ ಗ್ರಾಹಕರು 25 ದಿನಗಳ ಹಾಗೂ ಗ್ರಾಮೀಣ ಭಾಗದ ಗ್ರಾಹಕರು 45 ದಿನಗಳ ಅವಧಿಯಲ್ಲಿ ಬುಕ್ಕಿಂಗ್ ಮೂಲಕ ಸಿಲಿಂಡರ್ ಪಡೆಯಬಹುದಾಗಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ನಡೆದ ಎಲ್‌ಪಿಜಿ ವಿತರಕರು, ಹೋಟೆಲ್ ಮಾಲಿಕರು ಹಾಗೂ ಗ್ಯಾಸ್ ಏಜೆನ್ಸಿಗಳ ಪ್ರತಿನಿಧಿಗಳ ಸಭೆಯಲ್ಲಿ ಅವರು ಮಾತನಾಡಿದರು. ಗೃಹಬಳಕೆಯ ಸಿಲಿಂಡರ್‌ಗಳನ್ನು ಕಾಳಸಂತೆಯಲ್ಲಿ ಹೆಚ್ಚು ದರಕ್ಕೆ ಮಾರಾಟ ಮಾಡುವುದು ಅಥವಾ




ವಾಣಿಜ್ಯ ಬಳಕೆಗೆ ಬಳಸುವುದು ಕಾನೂನುಬಾಹಿರವಾಗಿದ್ದು, ಇಂತಹ ಪ್ರಕರಣಗಳು ಕಂಡುಬಂದರೆ ಅಗತ್ಯ ವಸ್ತುಗಳ ಕಾಯ್ದೆಯಡಿ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಸಿದರು.

ಜಿಲ್ಲೆಯಲ್ಲಿ ಅಕ್ರಮ ಸಿಲಿಂಡರ್ ವಿತರಣೆಯನ್ನು ತಡೆಯಲು ವಿಶೇಷ ತಂಡಗಳನ್ನು ರಚಿಸಲಾಗಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಿರ್ದೇಶನದಂತೆ ಗ್ರಾಹಕರಿಗೆ ಸಿಲಿಂಡರ್‌ಗಳನ್ನು ಸರಬರಾಜು ಮಾಡಲಾಗುತ್ತಿದೆ ಎಂದು ಹೇಳಿದರು.

ಧಾರವಾಡ ಜಿಲ್ಲೆಯಲ್ಲಿ ಐಓಸಿ – 13, ಬಿಪಿಸಿ – 18, ಎಚ್‌ಪಿಸಿ – 22 ಸೇರಿ ಒಟ್ಟು 55 ಗ್ಯಾಸ್ ಡೀಲರ್‌ಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಒಟ್ಟು 6,31,061 ಗೃಹಬಳಕೆ ಗ್ಯಾಸ್ ಸಂಪರ್ಕಗಳು ಹಾಗೂ 11,799 ವಾಣಿಜ್ಯ ಸಿಲಿಂಡರ್ ಸಂಪರ್ಕಗಳು ಇದ್ದು, ಒಟ್ಟಾರೆ 6,42,860 ಗ್ಯಾಸ್ ಸಂಪರ್ಕಗಳು ಜಿಲ್ಲೆಯಲ್ಲಿ ದಾಖಲಾಗಿವೆ. ಕಳೆದ 60 ದಿನಗಳ ಸರಾಸರಿಯಂತೆ ಪ್ರತಿದಿನ 10,987 ಸಿಲಿಂಡರ್‌ಗಳು ವಿತರಿಸಲಾಗುತ್ತಿದೆ ಎಂದು ತಿಳಿಸಿದರು.

ವೈದ್ಯಕೀಯ ಸಂಸ್ಥೆಗಳು, ಶಾಲಾ–ಕಾಲೇಜುಗಳು, ಅಂಗನವಾಡಿಗಳು, ಹಾಸ್ಟೇಲ್‌ಗಳು ಮತ್ತು ಇಂದಿರಾ ಕ್ಯಾಂಟೀನ್‌ಗಳಿಗೆ ಸಿಲಿಂಡರ್ ವಿತರಣೆಯಲ್ಲಿ ಆದ್ಯತೆ ನೀಡಲಾಗುತ್ತದೆ ಎಂದು ಹೇಳಿದರು.

ಗೃಹಬಳಕೆ ಸಿಲಿಂಡರ್‌ಗಳನ್ನು ವಾಣಿಜ್ಯ ಬಳಕೆಗೆ ▸▸4ನೇ ಪುಟಕ್ಕೆ

> "ಜಿಲ್ಲೆಯಲ್ಲಿ ಎಲ್‌ಪಿಜಿ ಸಿಲಿಂಡರ್ ಕೊರತೆ ಇಲ್ಲ. ಗ್ರಾಹಕರು ಬುಕ್ಕಿಂಗ್ ಮಾಡಿದ ಬಳಿಕ ನಿಗದಿತ ಅವಧಿ ಕಾಯಬೇಕು. ಕಾಳಸಂತೆಯಲ್ಲಿ ಮಾರಾಟ ಅಥವಾ ವಾಣಿಜ್ಯ ಬಳಕೆ ಕಂಡುಬಂದರೆ ಅಗತ್ಯ ವಸ್ತುಗಳ ಕಾಯ್ದೆಯಡಿ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ."
>
> **– ಜಿಲ್ಲಾಧಿಕಾರಿ ಸ್ನೇಹಲ್ ಆರ್.**

**ಧಾರವಾಡದಲ್ಲಿ ಸಿಲಿಂಡರ್ ವಿತರಣೆಯ ಮುಖ್ಯ ಮಾಹಿತಿ**

1) ನಗರ ಪ್ರದೇಶದಲ್ಲಿ ಸಿಲಿಂಡರ್ ರೀಫಿಲ್: 25 ದಿನಗಳ ನಂತರ
2) ಗ್ರಾಮೀಣ ಭಾಗದಲ್ಲಿ ರೀಫಿಲ್: 45 ದಿನಗಳ ನಂತರ
3) ಜಿಲ್ಲೆಯಲ್ಲಿ ಒಟ್ಟು ಗ್ಯಾಸ್ ಸಂಪರ್ಕಗಳು: 6,42,860
4) ಗೃಹಬಳಕೆ ಸಂಪರ್ಕಗಳು: 6,31,061
5) ವಾಣಿಜ್ಯ ಸಂಪರ್ಕಗಳು: 11,799
6) ಪ್ರತಿದಿನ ಸರಾಸರಿ ವಿತರಣೆ: 10,987 ಸಿಲಿಂಡರ್‌ಗಳು

### ಡಿಜಿಟಲ್ ಆ್ಯಪ್ ಮೂಲಕ ಜನಗಣತಿ; ಏಪ್ರಿಲ್ 1ರಿಂದ ಸ್ವಯಂ ಮಾಹಿತಿ ದಾಖಲಿಸಲು ಅವಕಾಶ

# ಗದಗದಲ್ಲಿ ಜನಗಣತಿ ವಿಧಾನಕ್ಕೆ ಮಾಸ್ಟರ್ ಟ್ರೇನರ್‌ಗಳಿಂದ ಪ್ರಾತ್ಯಕ್ಷಿಕೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ್ ಅವರ ನಿವಾಸದಲ್ಲಿ ಶುಕ್ರವಾರ ಜಿಲ್ಲೆಯ ಜನಗಣತಿ ಮಾಸ್ಟರ್ ಟ್ರೇನರ್‌ಗಳು ಭೇಟಿ ನೀಡಿ, ಜನಗಣತಿ ನಡೆಸುವ ವಿಧಾನ ಕುರಿತು ಪ್ರಾತ್ಯಕ್ಷಿಕೆ ನೀಡಿದರು.

ಜನಗಣತಿ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ಕ್ರಮಗಳು, ಮಾಹಿತಿಯನ್ನು ಸಂಗ್ರಹಿಸುವ ವಿಧಾನ ಹಾಗೂ ಗಣತಿ ವೇಳೆ ಎದುರಾಗಬಹುದಾದ ಸಮಸ್ಯೆಗಳ ಕುರಿತು ಮಾಸ್ಟರ್ ಟ್ರೇನರ್‌ಗಳು ವಿವರವಾಗಿ ತಿಳಿಸಿದರು.

ಜನಗಣತಿ ವೇಳೆ ಮನೆಯ ಸದಸ್ಯರ ಸಂಖ್ಯೆ, ವಿವಾಹಿತರ ವಿವರ, ಗ್ಯಾಸ್ ಸಂಪರ್ಕ, ಟಿವಿ ಸಂಪರ್ಕ ಸೇರಿದಂತೆ ಹಲವು ಮೂಲಭೂತ ಮಾಹಿತಿಗಳನ್ನು ಸಂಗ್ರಹಿಸಲಾಗುತ್ತದೆ. ಈ ಮಾಹಿತಿಯನ್ನು ಸಾರ್ವಜನಿಕರು ಗಣತಿದಾರರಿಗೆ ಸರಿಯಾಗಿ ನೀಡುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಬಾರಿ ಜನಗಣತಿ ಸಂಪೂರ್ಣವಾಗಿ ಡಿಜಿಟಲ್ ಮಾದರಿಯಲ್ಲಿ ಆ್ಯಪ್ ಮೂಲಕ ನಡೆಯಲಿದ್ದು, ಅದಕ್ಕಾಗಿ ಜಿಲ್ಲೆಯಾದ್ಯಂತ ಅಧಿಕಾರಿಗಳ ತಂಡಗಳನ್ನು ರಚಿಸಿ ತರಬೇತಿ ಪ್ರಕ್ರಿಯೆಗಳು ವೇಗವಾಗಿ ನಡೆಯುತ್ತಿವೆ ಎಂದು ಹೇಳಿದರು.

ಜನಗಣತಿ ಕಾರ್ಯವು ಎರಡು ಹಂತಗಳಲ್ಲಿ ನಡೆಯಲಿದೆ. ಸಾರ್ವಜನಿಕರಿಗೆ ಸ್ವಯಂವಾಗಿ ತಮ್ಮ ಮಾಹಿತಿಯನ್ನು ಪೋರ್ಟಲ್ ಮೂಲಕ ದಾಖಲಿಸಲು ಅವಕಾಶ ಕಲ್ಪಿಸಲಾಗಿದ್ದು, ಎಪ್ರಿಲ್ 1ರಿಂದ ಎಪ್ರಿಲ್ 15ರವರೆಗೆ ಈ ಸೌಲಭ್ಯ ಲಭ್ಯವಿರುತ್ತದೆ. ಎಪ್ರಿಲ್ 16ರಿಂದ ಗಣತಿದಾರರು ಮನೆ–ಮನೆಗೆ ಭೇಟಿ ನೀಡಿ ದಾಖಲಾದ ಮಾಹಿತಿಯನ್ನು ಪರಿಶೀಲಿಸಿ, ಉಳಿದವರ ಮಾಹಿತಿಯನ್ನು ಆ್ಯಪ್ ಮೂಲಕ ಸಂಗ್ರಹಿಸಲಿದ್ದಾರೆ ಎಂದು ತಿಳಿಸಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ತಹಶೀಲ್ದಾರ್ ಶ್ರೀನಿವಾಸ್ ಮೂರ್ತಿ ಸೇರಿದಂತೆ ಜನಗಣತಿ ಮಾಸ್ಟರ್ ಟ್ರೇನರ್‌ಗಳು ಉಪಸ್ಥಿತರಿದ್ದರು.

> "ಜನಗಣತಿ ವೇಳೆ ಕೇಳಲಾಗುವ ಮಾಹಿತಿಯನ್ನು ಸಾರ್ವಜನಿಕರು ಸರಿಯಾಗಿ ನೀಡಬೇಕು. ಇದರಿಂದ ಸರ್ಕಾರದ ಯೋಜನೆಗಳ ರೂಪುರೇಷೆಗಳಿಗೆ ನೆರವಾಗುತ್ತದೆ."
>
> **– ಸಿ. ಎನ್. ಶ್ರೀಧರ, ಜಿಲ್ಲಾಧಿಕಾರಿ.**

### ಕಾರ್ಮಿಕ ಹಕ್ಕುಗಳು, ರಜೆ ಹಕ್ಕುಗಳು ಜಾರಿಗೊಳಿಸುವಂತೆ ಮನವಿ

# ಮಹಿಳಾ ಹಕ್ಕುಗಳಿಗಾಗಿ ಗದಗದಲ್ಲಿ ಜಾಗೃತಿ



**■ವಿಜಯಸಾಕ್ಷಿ ಸುದ್ದಿ, ಗದಗ**

118ನೇ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ 2026ನ ಸಂದರ್ಭದಲ್ಲಿ, ಸಿಐಟಿಯು, ಕೆಆರ್‌ಪಿಎಸ್, ಎಸ್.ಎಫ್.ಐ, ಡೀ.ವಾಯ್.ಎಫ್.ಐ ಸೇರಿದಂತೆ ವಿವಿಧ ಜಿಲ್ಲಾ ಜಂಟಿ ಸಮಿತಿಗಳು ಗದಗದಲ್ಲಿ ಮಹತ್ವದ ಪ್ರತಿಭಟನೆಯನ್ನು ಆಯೋಜಿಸಿ, ಮಹಿಳೆಯರು ಎದುರಿಸುತ್ತಿರುವ ಅಸಮಾನತೆ, ದೌರ್ಜನ್ಯ ಮತ್ತು ಲಿಂಗ ತಾರತಮ್ಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ರಾಜ್ಯಪಾಲರಿಗೆ ಮನವಿ ಸಲ್ಲಿಸಿದ್ದಾರೆ.

ಮಹಿಳೆಯರ ಸಮಾಜದಲ್ಲಿ ಪರಿಗಣನೆ, ಉದ್ಯೋಗ, ಸುರಕ್ಷತೆ ಮತ್ತು ಸಮಾನತೆಯನ್ನು ಕಾಯ್ದುಕೊಳ್ಳುವ ಅಗತ್ಯತೆಯನ್ನು ತಿಳಿಸುತ್ತದೆ. ವರದಿ ಪ್ರಕಾರ, "ಈ ದಿನದಂದು ಮಹಿಳೆಯರು ಮನೆ ಒಳಗೂ ಹೊರಗೂ ಎಲ್ಲ ಕ್ಷೇತ್ರಗಳಲ್ಲಿ ದುಡಿಯುತ್ತಿದ್ದಾರೆ. ಆದರೆ, ಕಾನೂನು ನಿರ್ವಹಣೆಯಲ್ಲಿ ಅವರನ್ನು ತೀರ ಸ್ವತಂತ್ರವಾಗಿ ಪರಿಗಣಿಸಲಾಗುತ್ತಿಲ್ಲ. ಕಾರ್ಮಿಕ ಕಾನೂನು ವಿನಾಯತಿ ಮತ್ತು ವೇತನ ವ್ಯಾಖ್ಯಾನದ ಕೊರತೆ ಮಹಿಳೆಯರ ▸▸4ನೇ ಪುಟಕ್ಕೆ

> ಗದಗದಲ್ಲಿ 118ನೇ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ 2026 ಸಂದರ್ಭದಲ್ಲಿ ಸಿಐಟಿಯು, ಕೆಆರ್‌ಪಿಎಸ್, ಎಸ್‌ಎಫ್‌ಐ, ಡೀವೈಎಫ್‌ಐ ಸೇರಿದಂತೆ ಸಮಿತಿಗಳು ಮಹಿಳಾ ಹಕ್ಕುಗಳು, ಸಮಾನ ವೇತನ, ರಜೆ ಹಕ್ಕುಗಳು, ಸುರಕ್ಷತೆ, ದೌರ್ಜನ್ಯ ತಡೆ ಹಾಗೂ ಉದ್ಯೋಗ ಖಾತ್ರಿಗಾಗಿ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

### ಮುಳಗುಂದದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ – ಶಿಕ್ಷಣ, ಆರೋಗ್ಯ ಸೌಲಭ್ಯಗಳ ಅಗತ್ಯತೆ ಕುರಿತು ಚರ್ಚೆ

# ಸಮಾಜ ಸುಧಾರಣೆಯಲ್ಲಿ ಮಹಿಳೆಯರ ಪಾತ್ರ ಮಹತ್ವದ್ದು




**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸಮಾಜದ ಸುಧಾರಣೆಯಲ್ಲಿ ಮಹಿಳೆಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ನಿರ್ಮಲಾ ಹಡಪದ ಹೇಳಿದರು.

ಪಟ್ಟಣದ ಆರ್.ಎನ್. ದೇಶಪಾಂಡೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ ಹಾಗೂ ಮಹಿಳಾ ಘಟಕದ ವತಿಯಿಂದ ಆಯೋಜಿಸಲಾದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಹಿಳೆ ಕೇವಲ ಕುಟುಂಬದ ಆಧಾರವಾಗಿರದೆ ಸಮಾಜದ ಪ್ರಗತಿಗೆ ಪ್ರಮುಖ ಶಕ್ತಿಯಾಗಿ ಬೆಳೆಯುತ್ತಿದ್ದು, ವಿವಿಧ ಕ್ಷೇತ್ರಗಳಲ್ಲಿ ಪುರುಷರಷ್ಟೇ ಸಮಾನವಾಗಿ ಸಾಧನೆ ಮಾಡುತ್ತಿದ್ದಾಳೆ ಎಂದರು.

ಗ್ರಾಮೀಣ ಪ್ರದೇಶಗಳ ಮಹಿಳೆಯರಿಗೆ ಸಮರ್ಪಕ ಶಿಕ್ಷಣ ಹಾಗೂ ಆರೋಗ್ಯ ಸೌಲಭ್ಯಗಳು ದೊರೆಯಬೇಕಾದ ಅಗತ್ಯವಿದೆ. ಸಮಾಜದಲ್ಲಿ ಮಹಿಳೆಯರನ್ನು ಗೌರವದಿಂದ ಕಾಣುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಅವರು ಹೇಳಿದರು.

ಮಹಿಳಾ ಘಟಕದ ಸಂಯೋಜಕಿ ಅನುಪಮಾ ಮಾತನಾಡಿ, ಮಹಿಳೆಯರಿಗೆ ಸಮಾನ ಅವಕಾಶಗಳನ್ನು ನೀಡಿದಾಗ ಮಾತ್ರ ಅವರು ಸಮಾಜದ ಅಭಿವೃದ್ಧಿಗೆ ಹೆಚ್ಚಿನ ಕೊಡುಗೆ ನೀಡಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಡಾ. ಆರ್.ಎಂ. ಕಲ್ಲನಗೌಡರ, ನಾಗರಾಜ ಎ., ವಸಂತ ಕುಮಾರ, ಬಸವರಾಜ ಹೂಗಾರ, ರಾಜು ಬಿ.ಕೆ., ಮಾರುತಿ, ವಿಠೋಭಾ ಮಾಳೋಧಕರ, ಸುರೇಶಗೌಡ, ವಿನಾಯಕ, ಡಾ. ಎಚ್. ಬಾರಕೇರ, ಫಕ್ಕೀರೇಶ ಕಂಬಳಿ, ಚಂದ್ರಕಾಂತ ತೋಟಿ, ಜೈತುನಬಿ ಸುಂಕದ, ಕೌಸರಬಾನು ಸುಂಕದ, ಶೈನಜ್ ಬೂದಿಹಾಳ, ಶಬಿನಾ ಬೂದಿಹಾಳ, ಲಕ್ಷ್ಮಿ ಸುಂಕದ ಹಾಗೂ ದಿವ್ಯ ಕಾಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> "ಮಹಿಳೆಯರು ಕುಟುಂಬ ಮಾತ್ರವಲ್ಲದೆ ಸಮಾಜದ ಅಭಿವೃದ್ಧಿಯಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಅವರಿಗೆ ಸಮಾನ ಅವಕಾಶ ಮತ್ತು ಸೌಲಭ್ಯಗಳನ್ನು ಒದಗಿಸಿದಾಗ ಸಮಾಜ ಇನ್ನಷ್ಟು ಪ್ರಗತಿ ಸಾಧಿಸುತ್ತದೆ."
>
> **– ನಿರ್ಮಲಾ ಹಡಪದ.**

# ಯುವನಿಧಿ ಯೋಜನೆಯ ಸೌಲಭ್ಯ ಅರ್ಹರು ಪಡೆದುಕೊಳ್ಳಬೇಕು

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆಯ ಸೌಲಭ್ಯವನ್ನು ಅರ್ಹರು ಪಡೆದುಕೊಳ್ಳಬೇಕು ಎಂದು ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಹೇಳಿದರು.

ನಗರದ ಆದರ್ಶ ಶಿಕ್ಷಣ ಸಮಿತಿಯ ವಾಣಿಜ್ಯ ಮಹಾವಿದ್ಯಾಲಯದ ಎಸ್.ಜೆ. ಹಾಲ್‌ನಲ್ಲಿ ಕೈಗಾರಿಕೆ ತರಬೇತಿ ಮತ್ತು ಉದ್ಯೋಗ ಇಲಾಖೆ ಹಾಗೂ ಆದರ್ಶ ಶಿಕ್ಷಣ ಸಮಿತಿಯ ವಾಣಿಜ್ಯ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ವೃತ್ತಿ ಮಾರ್ಗದರ್ಶನ ಸಮಾಲೋಚನೆ ಮತ್ತು ಉದ್ಯೋಗಕೋಶ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪದವಿ ಅಥವಾ ಡಿಪ್ಲೋಮಾ ಮುಗಿಸಿದ ಯುವಕರಿಗೆ ಉದ್ಯೋಗ ತರಬೇತಿ ಹಾಗೂ ಕೌಶಲ್ಯಾಭಿವೃದ್ಧಿ ತರಬೇತಿ ನೀಡುವುದು ಈ ಕಾರ್ಯಾಗಾರದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು. ರಾಜ್ಯ ಸರ್ಕಾರ ಚುನಾವಣೆಗೆ ಪೂರ್ವದಲ್ಲಿ ನೀಡಿದ ಐದು




ಗ್ಯಾರಂಟಿಗಳಾದ ಅನ್ನಭಾಗ್ಯ, ಗೃಹಲಕ್ಷ್ಮಿ, ಶಕ್ತಿ, ಗೃಹಜ್ಯೋತಿ ಹಾಗೂ ಯುವನಿಧಿ ಯೋಜನೆಗಳನ್ನು ಜಾರಿಗೆ ತಂದು ಬಡಜನರ ಆರ್ಥಿಕ ಸಬಲೀಕರಣಕ್ಕೆ ನೆರವಾಗಿದೆ ಎಂದರು.

ಯುವನಿಧಿ ಯೋಜನೆಯಡಿ ನಿರುದ್ಯೋಗಿ ಪದವೀಧರರಿಗೆ ತಿಂಗಳಿಗೆ 3,000 ಹಾಗೂ ಡಿಪ್ಲೋಮಾ ಪಡೆದವರಿಗೆ 1,500 ಭತ್ಯೆಯನ್ನು ಗರಿಷ್ಠ ಎರಡು ವರ್ಷಗಳವರೆಗೆ ಅಥವಾ ಉದ್ಯೋಗ ದೊರೆಯುವವರೆಗೆ ನೀಡಲಾಗುತ್ತದೆ. ಈ ಯೋಜನೆಯ ಸೌಲಭ್ಯವನ್ನು ಅರ್ಹ ಫಲಾನುಭವಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮಾತನಾಡಿ, ಯುವನಿಧಿ ಯೋಜನೆ ಯುವಕರಿಗೆ ಪದವಿ ಪೂರ್ಣಗೊಂಡ ನಂತರ ಉದ್ಯೋಗ ದೊರೆಯುವವರೆಗೆ ಆರ್ಥಿಕ ಸಹಾಯ ನೀಡುವ ಉದ್ದೇಶದಿಂದ ಜಾರಿಗೆ ತರಲಾಗಿದೆ. ಯುವಕರು ಈ ಹಣವನ್ನು ಪಾಕೆಟ್ ಮನಿ ಎಂದು ಬಳಸದೇ ಉದ್ಯೋಗಕ್ಕೆ ಸಹಾಯಕವಾಗುವ ಕೌಶಲ್ಯಾಭಿವೃದ್ಧಿಗೆ ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಆನಂದ ಹೊಂಬಳ ಅವರು ಯುವನಿಧಿ ಯೋಜನೆ, ವೃತ್ತಿ ಮಾರ್ಗದರ್ಶನ ಹಾಗೂ ಸರ್ಕಾರದಿಂದ ದೊರೆಯುವ ವಿವಿಧ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಉದ್ಯೋಗ ವಿನಿಮಯ ಅಧಿಕಾರಿ ಬಸವಂತಪ್ಪ ಪಿ., ವಾಣಿಜ್ಯ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ವಿ.ಟಿ. ನಾಯ್ಕರ್, ಆದರ್ಶ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಎ.ಡಿ. ಗೋಡಖಿಂಡಿ, ವೃತ್ತಿ ಮಾರ್ಗದರ್ಶನ ಸಮಾಲೋಚನೆಯ ಮುಖ್ಯಸ್ಥ ಐ.ಎಂ. ಯಾವಗಲ್ ಹಾಗೂ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

## ವೀರಶೈವ ಲಿಂಗಾಯತ ರುದ್ರಭೂಮಿಯಲ್ಲಿ ಜೆಸಿಬಿ ಶೆಡ್ ನಿರ್ಮಾಣಕ್ಕೆ ಭೂಮಿ ಪೂಜೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವೀರಶೈವ ಲಿಂಗಾಯತ ರುದ್ರಭೂಮಿಯಲ್ಲಿ ಜೆಸಿಬಿ ಯಂತ್ರ ನಿಲ್ಲಿಸಲು ನಿರ್ಮಿಸಲಾಗುವ ಶೆಡ್ ಕಾಮಗಾರಿಗೆ ಭೂಮಿ ಪೂಜೆ ನೆರವೇರಿತು. ಗದಗ-ಬೆಟಗೇರಿ ನಗರಸಭೆಯ ಅನುದಾನದಲ್ಲಿ ಸುಮಾರು 6.5 ಲಕ್ಷ ವೆಚ್ಚದಲ್ಲಿ ಈ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ.

ರುದ್ರಭೂಮಿ ಸಮಿತಿಯ ಅಧ್ಯಕ್ಷರು ಹಾಗೂ ಗದಗ-ಬೆಟಗೇರಿ ನಗರಸಭೆಯ ಹಿರಿಯ ಸದಸ್ಯರಾದ ವಿನಾಯಕ ಮಾನ್ವಿ ಅವರು ಭೂಮಿ ಪೂಜೆ ನೆರವೇರಿಸಿ ಮಾತನಾಡಿ, ರುದ್ರಭೂಮಿಯಲ್ಲಿ ಈಗಾಗಲೇ ಸುತ್ತಮುತ್ತ ಕಂಪೌಂಡ್ ನಿರ್ಮಿಸಿ ತಂತಿ ಬೇಲಿ ಹಾಕಲಾಗಿದ್ದು, ವಿದ್ಯುತ್ ದೀಪಗಳ ವ್ಯವಸ್ಥೆ ಹಾಗೂ ನೀರಿನ ವ್ಯವಸ್ಥೆ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು. ಇದೀಗ ಜೆಸಿಬಿ ಯಂತ್ರ ನಿಲ್ಲಿಸಲು ಶೆಡ್ ನಿರ್ಮಾಣವನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಮಿತಿಯ ಕಾರ್ಯದರ್ಶಿ ಚಟ್ಟಿ ವಕೀಲರು, ಎಂ. ವ್ಹಿ. ಮರಿಗೌಡರ, ಗಣ್ಯ ಉದ್ಯಮಿ ಅಶೋಕ ಸಂಕಣ್ಣವರ, ಹಿರಿಯ ಮುಖಂಡರಾದ ಬಾಲಚಂದ್ರ ಭರಮಗೌಡ್ರ, ವಿರುಪಾಕ್ಷಗೌಡ ದೇಸಾಯಿಗೌಡ್ರ, ಶಿವಯ್ಯ ನಾಲ್ವತವಾಡಮಠ, ಸಂತೋಷ ಜಿ., ವಿರುಪಾಕ್ಷಪ್ಪ ಅಕ್ಕಿ, ಶಾಂತಣ್ಣ ಮುಳವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.


### ಬಿಸಿಲಿನ ತೀವ್ರತೆ ಹೆಚ್ಚುತ್ತಿರುವ ಹಿನ್ನೆಲೆ- ಸಾರ್ವಜನಿಕರು ಜಾಗರೂಕರಾಗಬೇಕು – ಡಾ. ಎಸ್.ಎಸ್. ನೀಲಗುಂದ

# ಬೇಸಿಗೆಯಲ್ಲಿ ಆರೋಗ್ಯದ ರಕ್ಷಣೆಗೆ ಮುಂಜಾಗ್ರತೆ ಅಗತ್ಯ

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಾದ್ಯಂತ ಮಾರ್ಚ್ ತಿಂಗಳಿಂದ ಬಿಸಿಲಿನ ಪ್ರಖರತೆ ಮತ್ತು ತೀವ್ರತೆ ಹೆಚ್ಚುತ್ತಿರುವ ಹಿನ್ನೆಲೆ ಸಾರ್ವಜನಿಕರು, ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಹಾಗೂ ವಯೋವೃದ್ಧರು ತಮ್ಮ ಆರೋಗ್ಯದ ರಕ್ಷಣೆಗೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಎಸ್. ನೀಲಗುಂದ ತಿಳಿಸಿದ್ದಾರೆ.

ಬೇಸಿಗೆ ಸಮಯದಲ್ಲಿ ಹೆಚ್ಚು ನೀರು ಕುಡಿಯುವುದು, ಮಜ್ಜಿಗೆ, ಎಳನೀರು ಮತ್ತು ಹಣ್ಣಿನ ರಸ ಸೇವಿಸುವುದು ಉತ್ತಮ. ನೀರಿನ ಅಂಶ ಹೆಚ್ಚಿರುವ ಹಣ್ಣು-ತರಕಾರಿಗಳನ್ನು ಸೇವಿಸಬೇಕು. ಸಡಿಲವಾದ ತೆಳು ಬಣ್ಣದ ಹತ್ತಿ ಬಟ್ಟೆ ಹಾಗೂ ಗಾಳಿಯಾಡುವ ಪಾದರಕ್ಷೆ ಧರಿಸಬೇಕು.



ಹೊರಗಡೆ ತೆರಳುವಾಗ ತಂಪು ಕನ್ನಡಕ, ಛತ್ರಿ ಅಥವಾ ಟವೆಲ್ ಬಳಸಿ ಬಿಸಿಲಿನಿಂದ ರಕ್ಷಣೆ ಪಡೆಯಬೇಕು. ರೇಡಿಯೊ, ದೂರದರ್ಶನ ಹಾಗೂ ದಿನಪತ್ರಿಕೆಗಳಲ್ಲಿ ನೀಡುವ ಹೀಟ್ ವೇವ್ ಮಾಹಿತಿಯನ್ನು ಗಮನಿಸಿ ದೈನಂದಿನ ಚಟುವಟಿಕೆಗಳನ್ನು ಯೋಜಿಸಿಕೊಳ್ಳಬೇಕು.

ಬಿಸಿಲಿನಲ್ಲಿ ಕೆಲಸ ಮಾಡುವವರು ಬೆಳಗ್ಗೆ 11 ಗಂಟೆಯೊಳಗೆ ಅಥವಾ ಸಂಜೆ 4 ಗಂಟೆಯ ನಂತರ ಕೆಲಸ ಮಾಡುವುದು ಉತ್ತಮ. ಈ ಅವಧಿಯಲ್ಲಿ ಶ್ರಮದಾಯಕ ಕೆಲಸಗಳಿಂದ ವಿಶ್ರಾಂತಿ ಪಡೆಯಬೇಕು. ಬಿಸಿಲಿನಲ್ಲಿ ನಡೆಯುವಾಗ ಚಪ್ಪಲಿ ಧರಿಸಬೇಕು. ಟೀ, ಕಾಫಿ, ಹೆಚ್ಚು ಸಕ್ಕರೆ ಇರುವ ಪಾನೀಯಗಳು ಹಾಗೂ ಮದ್ಯಪಾನದಿಂದ ದೂರವಿರಬೇಕು.

> "ಬೇಸಿಗೆಯಲ್ಲಿ ದೇಹದಲ್ಲಿ ನೀರಿನ ಅಂಶ ಕಡಿಮೆಯಾಗದಂತೆ ಹೆಚ್ಚು ನೀರು, ಮಜ್ಜಿಗೆ, ಎಳನೀರು ಸೇವಿಸಿ. ಬಿಸಿಲಿನ ತೀವ್ರತೆಯಿಂದ ಆರೋಗ್ಯ ಸಮಸ್ಯೆಗಳು ಕಾಣಿಸಿದರೆ ತಕ್ಷಣ ಸಮೀಪದ ಆರೋಗ್ಯ ಕೇಂದ್ರವನ್ನು ಸಂಪರ್ಕಿಸಿ."
> – **ಡಾ. ಎಸ್.ಎಸ್. ನೀಲಗುಂದ,** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ

**ಬೇಸಿಗೆಯಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತೆಗಳು**

1) ದಿನಕ್ಕೆ ಹೆಚ್ಚು ನೀರು ಕುಡಿಯಿರಿ
2) ಮಜ್ಜಿಗೆ, ಎಳನೀರು ಮತ್ತು ಹಣ್ಣಿನ ರಸ ಸೇವಿಸಿ
3) ನೀರಿನ ಅಂಶ ಹೆಚ್ಚಿರುವ ಹಣ್ಣು-ತರಕಾರಿಗಳನ್ನು ಸೇವಿಸಿ
4) ಸಡಿಲವಾದ ಹತ್ತಿ ಬಟ್ಟೆ ಧರಿಸಿ
5) ಹೊರಗೆ ಹೋಗುವಾಗ ಛತ್ರಿ, ಟವೆಲ್ ಅಥವಾ ತಂಪು ಕನ್ನಡಕ ಬಳಸಿ
6) ಬೆಳಗ್ಗೆ 11ರೊಳಗೆ ಅಥವಾ ಸಂಜೆ 4 ನಂತರ ಹೊರಗಡೆ ಕೆಲಸ ಮಾಡಿ
7) ಟೀ, ಕಾಫಿ, ಸಕ್ಕರೆ ಪಾನೀಯ ಹಾಗೂ ಮದ್ಯಪಾನದಿಂದ ದೂರವಿರಿ
8) ಅಸ್ವಸ್ಥತೆ ಕಂಡುಬಂದರೆ ಸಮೀಪದ ಆರೋಗ್ಯ ಕೇಂದ್ರ ಅಥವಾ 108/102 ಸಹಾಯವಾಣಿ ಸಂಪರ್ಕಿಸಿ.

## ಮಡಿವಾಳ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸಲು ಆಗ್ರಹ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಕರ್ನಾಟಕ ರಾಜ್ಯ ಮಡಿವಾಳರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಉತ್ತರ ಕರ್ನಾಟಕ ಮಡಿವಾಳರ ಸಂಘದ ವತಿಯಿಂದ ಜಗದ್ಗುರು ಡಾ. ಶ್ರೀ ಬಸವ ಮಾಚಿದೇವ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಮಡಿವಾಳ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸಲು ಆಗ್ರಹಿಸಿ ಭಿತ್ತಿಪತ್ರ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಉಪಾಧ್ಯಕ್ಷ ದ್ಯಾಮಣ್ಣ ಮಡಿವಾಳರ ಮಾತನಾಡಿ, ಮಡಿವಾಳ ಸಮಾಜಕ್ಕೆ ಸಿಗಬೇಕಾದ ಹಕ್ಕುಗಳನ್ನು ಪಡೆಯುವ ಉದ್ದೇಶದಿಂದ ಮಾ.16ರಂದು ಬೆಂಗಳೂರಿನ ಫ್ರೀಡಮ್ ಪಾರ್ಕ್‌ನಲ್ಲಿ ಹೋರಾಟವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು. "ಕರ್ನಾಟಕದಲ್ಲಿ ಪರಿಶಿಷ್ಟ ಜಾತಿ ಸ್ಥಾನಮಾನಕ್ಕಾಗಿ ನಮ್ಮ ಸಮಾಜದ ಕೂಗು ಹಲವು ದಶಕಗಳಿಂದ ಕೇಳಿಬರುತ್ತಿದೆ. ಆದರೆ ಈವರೆಗೆ ನ್ಯಾಯ ಸಿಗದೆ, ನಮ್ಮ ಹಕ್ಕುಗಳನ್ನು ಇತರ ಬಲಿಷ್ಠ ಜಾತಿಗಳು ಆಕ್ರಮಿಸಿಕೊಂಡಿರುವುದರಿಂದ ಸಮಾಜ ನಿರ್ಲಕ್ಷ್ಯಕ್ಕೆ ಒಳಗಾಗಿದೆ. ಸಮಾಜದ ಹಕ್ಕಿಗಾಗಿ ಈ ಹೋರಾಟ ನಡೆಯಲಿದೆ" ಎಂದು ಹೇಳಿದರು.

ಗಡಗ ಜಿಲ್ಲಾ ಯು.ವಿ. ಘಟಕದ ಅಧ್ಯಕ್ಷ ನಿಂಬಣ್ಣ ಮಡಿವಾಳರ ಮಾತನಾಡಿ, ಕರ್ನಾಟಕ ರಾಜ್ಯ ಮಡಿವಾಳರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಉತ್ತರ ಕರ್ನಾಟಕ ಮಡಿವಾಳರ ಸಂಘಟನೆಯ ಶಿಫಾರಸ್ಸು ಪತ್ರಗಳನ್ನು 19 ಸಚಿವರು ಹಾಗೂ 137 ಶಾಸಕರು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದಾರೆ ಎಂದು ತಿಳಿಸಿದರು. ಪ್ರೊಫೆಸರ್ ಡಾ. ಅನ್ನಪೂರ್ಣ ವರದಿಯನ್ನು ಜಾರಿಗೊಳಿಸುವಂತೆ ಒಟ್ಟು 156 ಶಿಫಾರಸ್ಸು ಪತ್ರಗಳು ಸಲ್ಲಿಕೆಯಾಗಿದ್ದರೂ ಸರ್ಕಾರದಿಂದ ಯಾವುದೇ ಸ್ಪಷ್ಟ ಪ್ರತಿಕ್ರಿಯೆ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಮಾಜದ ಪ್ರಮುಖರಾದ ಶಿವಪ್ಪ ಮಡಿವಾಳರ, ಆನಂದ ಮಡಿವಾಳರ, ವಿನೋದ ಮಡಿವಾಳರ, ಬಸಪ್ಪ ಮಡಿವಾಳರ, ನಿಂಗಬಸಪ್ಪ ಮಡಿವಾಳರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಾವಯವ ಕೃಷಿಯಿಂದ ಮಾತ್ರ ಮನುಷ್ಯನ ಉಳಿವು

**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಭವಿಷ್ಯದ ದಿನಗಳಲ್ಲಿ ದೇಶದಲ್ಲಿ ಸಾವಯವ ಕೃಷಿಗೆ ಇನ್ನಿಲ್ಲದ ಪ್ರಾಮುಖ್ಯತೆ ದೊರಕುತ್ತದೆ. ಸಾವಯವ ಕೃಷಿಯಿಂದ ಮಾತ್ರ ಮನುಷ್ಯನ ಉಳಿವು ಸಾಧ್ಯವಾಗುತ್ತದೆ ಎಂದು ಕೋಟುಮಚಗಿಯ ಸಾವಯವ ಕೃಷಿಕ ವೀರೇಶ ನೇಗಲಿ ಹೇಳಿದರು.

ಜಕ್ಕಲಿ ಗ್ರಾಮದಲ್ಲಿ ರೋಣದ ರಾಜೀವ ಗಾಂಧಿ ಶಿಕ್ಷಣ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯದ ವತಿಯಿಂದ ಹಮ್ಮಿಕೊಂಡಿರುವ ಎನ್‌ಎಸ್‌ಎಸ್ ವಾರ್ಷಿಕ ಶಿಬಿರದಲ್ಲಿ ಸಾವಯವ ಕೃಷಿಯ ಮಹತ್ವದ ಕುರಿತು ಉಪನ್ಯಾಸ ನೀಡಿದ ಅವರು, ಸಾವಯವ ಕೃಷಿಯು ಒಂದು ತಂತ್ರವಾಗಿದ್ದು, ಇದರಲ್ಲಿ ಗಾಳಿ, ನೀರು ಮತ್ತು ಮಣ್ಣಿನಂತಹ ನೈಸರ್ಗಿಕ ಸಂಪನ್ಮೂಲಗಳನ್ನು ಬಳಸಿಕೊಂಡು ಸುಸ್ಥಿರ ವಿಧಾನದ ಮೂಲಕ ಭೂಮಿಯ ಕೃಷಿ ನಡೆಯುತ್ತದೆ. ಭೂಮಿ ಉಳಿದರೆ ಮಾತ್ರ ಮನುಷ್ಯ ಉಳಿಯಲು ಸಾಧ್ಯ. ಭೂಮಿಯನ್ನು ಉಳಿಸಬೇಕು ಎಂದರೆ ಸಾವಯವ ಕೃಷಿ ಅನಿವಾರ್ಯ. ಸಾವಯವ ಕೃಷಿ ಇಲ್ಲದೇ ಮುಂದೆ ಜೀವನವಿಲ್ಲ ಎಂದರು.

2008ರ ಸಂಯುಕ್ತ ರಾಷ್ಟ್ರಗಳ ವರದಿ ಪ್ರಕಾರ ಸಾವಯವ ಕೃಷಿ ಆಫ್ರಿಕದಲ್ಲಿ ಹೆಚ್ಚು ಉಪಯೋಗಕರವಾದದ್ದು. ಅದು ರೂಢಿಯಲ್ಲಿರುವ ಕೃಷಿ ಪದ್ಧತಿಗಿಂತಲೂ ಹೆಚ್ಚು ಸುರಕ್ಷಿತವಾದದ್ದು, ದೀರ್ಘಕಾಲ ಬಾಳುವಂತಹುದು ಎಂದರು. ಈ ವರದಿಯು 24 ಆಫ್ರಿಕಾ ದೇಶಗಳಲ್ಲಿ 114 ಯೋಜನೆಗಳನ್ನು ಗಣನೆಗೆ ತೆಗೆದುಕೊಂಡು ಮೌಲ್ಯವನ್ನು ನಿರ್ಧರಿಸಿದೆ.

ಸಾವಯವ ಅಥವಾ ಅದಕ್ಕೆ ಸಮೀಪದ ವಿಧಾನಗಳನ್ನು ಅನುಸರಿಸಿರುವ ಉದಾಹರಣೆಗಳಲ್ಲಿ ಇಳುವರಿ ದುಪ್ಪಟ್ಟಾಗಿದೆ ಎಂದು ತಿಳಿಸುತ್ತದೆ. ಇದರಲ್ಲಿ ಮಣ್ಣಿನ ಸತ್ವ ಸುಧಾರಿಸಿರುವುದು ಮಾತ್ರವಲ್ಲದೆ ಬರಗಾಲವನ್ನು ತಡೆಯುವ ಶಕ್ತಿಯೂ ಹೆಚ್ಚು ಬಲಗೊಂಡಿದೆ ಎಂದು ಹೇಳುತ್ತದೆ. ಸಾವಯವ ಕೃಷಿಯು ಬೆಳವಣಿಗೆಗೆ ಮಹತ್ವಪೂರ್ಣ ಕೊಡುಗೆ ನೀಡುತ್ತದೆ. ಈ ಕೃಷಿಯಿಂದ ಭೂಮಿಯ ಫಲವತ್ತತೆ ಹೆಚ್ಚುತ್ತದೆ ಹಾಗೂ ಪರಿಸರವನ್ನು ಕಲುಷಿತಮುಕ್ತವಾಗಿಸುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ಶೇಖರಪ್ಪ ಮೇಟಿ, ಉಪಾಧ್ಯಕ್ಷ ಅರುಣ ಕಡಗದ, ಬಸಪ್ಪ ಕೊಪ್ಪದ, ದಿಲೀಪಕುಮಾರ ದೊಡ್ಡಮೇಟಿ, ಸುರೇಶ ಕೆಳಗಡೆ, ಜೀವನಸಾಬ ಬಸಾಪೂರ, ರಾಜಶೇಖರ ವಾಲಿ, ಜಂಬಣ್ಣ ಕುರ್ತಕೋಟಿ ಸೇರಿದಂತೆ ಇತರರಿದ್ದರು.

ಯೋಜನಾಧಿಕಾರಿ ಎಸ್. ಆರ್. ಐಹೊಳ್ಳಿ, ಪ್ರಾಚಾರ್ಯ ಡಾ. ವೈ.ಎನ್. ಪಾಪಣ್ಣವರ ಉಪಸ್ಥಿತರಿದ್ದರು.




## ಮಾ.15ರಂದು ಜೆಡಿಎಸ್ ಪದಾಧಿಕಾರಿಗಳ ಪದಸ್ವೀಕಾರ



**■ ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ**

ನವಲಗುಂದ ವಿಧಾನಸಭಾ ಕ್ಷೇತ್ರದ ಜಾತ್ಯಾತೀತ ಜನತಾದಳ (ಜೆಡಿಎಸ್) ಪದಾಧಿಕಾರಿಗಳ ಪದಸ್ವೀಕಾರ ಸಮಾರಂಭವನ್ನು ಮಾರ್ಚ್ 15ರಂದು ಬೆಳಿಗ್ಗೆ 11 ಗಂಟೆಗೆ ಪಟ್ಟಣದ ಎಪಿಎಂಸಿ ಸಮೀಪದ ಬಾಪೂಜಿ ಸದನದಲ್ಲಿ ನಡೆಸಲು ಜೆಡಿಎಸ್ ಮುಖಂಡರ ಪೂರ್ವಭಾವಿ ಸಭೆಯಲ್ಲಿ ತೀರ್ಮಾನಿಸಲಾಯಿತು.

ಜೆಡಿಎಸ್ ಧಾರವಾಡ ಗ್ರಾಮಾಂತರ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಬಿ. ಗಂಗಾಧರಮಠ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಕುರಿತು ಸುದೀರ್ಘ ಚರ್ಚೆ ನಡೆಯಿತು. ನವಲಗುಂದ ವಿಧಾನಸಭಾ ಕ್ಷೇತ್ರದ ಪದಾಧಿಕಾರಿಗಳ ಪದಸ್ವೀಕಾರ ಸಮಾರಂಭವನ್ನು ಅಣ್ಣಿಗೇರಿಯಲ್ಲಿ ನಡೆಸಿದರೆ, ಧಾರವಾಡ ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡ ಜಿಲ್ಲಾ ಗ್ರಾಮಾಂತರ ಪದಾಧಿಕಾರಿಗಳ ಪದಸ್ವೀಕಾರ ಸಮಾರಂಭವನ್ನು ನವಲಗುಂದದಲ್ಲಿ ಆಯೋಜಿಸಲಾಗುವುದು ಎಂದು ಗಂಗಾಧರಮಠ ತಿಳಿಸಿದರು.

ಮುಂದಿನ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗೆ ಸಂಬಂಧಿಸಿ ವಿವಿಧ ವರ್ಗಗಳಿಗೆ ತಕ್ಕಂತೆ ಅಭ್ಯರ್ಥಿಗಳನ್ನು ತಯಾರಿಸಿಕೊಳ್ಳಲು ಸಭೆಯಲ್ಲಿ ಚರ್ಚಿಸಲಾಯಿತು. ಬಿಜೆಪಿಯೊಂದಿಗೆ ಹೊಂದಾಣಿಕೆ ಸಾಧ್ಯವಾದರೆ ಮಾಡಿಕೊಳ್ಳುವುದು, ಇಲ್ಲವಾದರೆ ಪ್ರತಿಯೊಂದು ಕ್ಷೇತ್ರದಲ್ಲೂ ಜೆಡಿಎಸ್ ಸ್ವತಂತ್ರವಾಗಿ ಸ್ಪರ್ಧಿಸುವುದಾಗಿ ಮುಖಂಡರು ಅಭಿಪ್ರಾಯ ವ್ಯಕ್ತಪಡಿಸಿದರು.

ಜೆಡಿಎಸ್ ಶಕ್ತಿಯ ಬಗ್ಗೆ ಕೆಲವರಿಗೆ ಇರುವ ಹಗುರ ಭಾವನೆಯನ್ನು ಚುನಾವಣೆಯಲ್ಲಿ ಎದುರಿಸಿ ನಿವಾರಣೆ ಮಾಡೋಣ, ಪಕ್ಷದ ಬಲವನ್ನು ತೋರಿಸೋಣ ಎಂದು ಮುಖಂಡರು ಗಟ್ಟಿಯಾಗಿ ಪ್ರತಿಪಾದಿಸಿದರು. ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಎಚ್ ಡಿ ದೇವೇಗೌಡ ಅವರು ಹೊಂದಾಣಿಕೆ ವಿಧಾನಸಭೆ ಹಾಗೂ ಲೋಕಸಭೆ ಚುನಾವಣೆಗಳಲ್ಲಿ ಮಾತ್ರ ಇರಬಹುದು, ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಪಕ್ಷ ಸ್ವತಂತ್ರವಾಗಿ ಸ್ಪರ್ಧಿಸುತ್ತದೆ ಎಂದು ಈಗಾಗಲೇ ಸ್ಪಷ್ಟಪಡಿಸಿರುವುದಾಗಿ ಸಭೆಯಲ್ಲಿ ತಿಳಿಸಲಾಯಿತು.

ಸಭೆಯಲ್ಲಿ ಮಾಜಿ ಸಚಿವ ಕೆ.ಎನ್. ಗಡ್ಡಿ, ಸಿ.ಎಸ್. ಪಾಟೀಲ, ಜಿ.ಎನ್. ತೋಟದ, ಎಂ.ಎಸ್. ಪಾಟೀಲ, ಶ್ರೀಶೈಲ ಮೂಲಿಮನಿ, ಶಿವಶಂಕರ ಕಲ್ಲೂರ, ಪ್ರಕಾಶ ಅಂಗಡಿ, ಡಿ.ಎಂ. ಶಲವಡಿ, ವೀರೇಶ ಶಾನುಭೋಗರ, ಮೌಲಾಸಾಬ್ ವೈದ್ಯ, ಮಂಜಪ್ಪ ಆಡಕಾವು, ಕಿರಣ ಬೂದಿಹಾಳ, ಡಿ.ಬಿ. ನರಗುಂದ, ಉಮೇಶ ನರಗುಂದಮಠ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

### ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ, ಶ್ರೀ ವೀರಭದ್ರೇಶ್ವರ ದಾಸೋಹ ನಿಲಯ ಉದ್ಘಾಟನೆ

# ಪ್ರಗತಿಪರ ಧ್ಯೇಯೋದ್ದೇಶಗಳು ಮಾನವನ ಶ್ರೇಯಸ್ಸಿಗೆ ದಾರಿದೀಪ



**■ ವಿಜಯಸಾಕ್ಷಿ ಸುದ್ದಿ, ಆಳಂದ**

ಅರಿತು ನಡೆದರೆ ಬಾಳು ಬಂಗಾರ, ಮರೆತು ನಡೆದರೆ ಬದುಕು ಬಂಧನ. ಅರಿವಿನ ಆಚಾರ ಬದುಕಿನ ಉನ್ನತಿಗೆ ಸೋಪಾನವಾಗುತ್ತದೆ. ಮಾನವನ ಬದುಕು ಅರಿವಿನ ಬೆಳಕಿನಿಂದ ತುಂಬಿರಬೇಕು. ಪ್ರಗತಿಪರ ಧ್ಯೇಯೋದ್ದೇಶಗಳು ಮಾನವನ ಶ್ರೇಯಸ್ಸಿಗೆ ದಾರಿದೀಪವಾಗುತ್ತವೆ ಎಂದು ಬಾಳೆಹೊನ್ನೂರಿನ ರಂಭಾಪುರಿ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಮಹಾಸ್ವಾಮಿಗಳು ಹೇಳಿದರು.

ಗುರುವಾರ ಜಿಲ್ಲೆಯ ಚಲಗೇರಾದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಣವ ಕುಟೀರದ ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಶ್ರೀ ವೀರಭದ್ರೇಶ್ವರ ದಾಸೋಹ ನಿಲಯದ ಉದ್ಘಾಟನೆ ಕಾರ್ಯಕ್ರಮದಲ್ಲಿ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಮಾನವ ಜೀವನದಲ್ಲಿ ಬದಲಾವಣೆ ಮತ್ತು ಬೆಳವಣಿಗೆ ಎರಡೂ ಅಗತ್ಯ. ಅಸತ್ಯದಿಂದ ಸತ್ಯದತ್ತ, ಕತ್ತಲೆಯಿಂದ ಬೆಳಕಿನತ್ತ ಹಾಗೂ ಸಾವಿನಿಂದ ಅಮರತ್ವದತ್ತ ಸಾಗುವ ಗುರಿ ಮನುಷ್ಯನದಾಗಬೇಕು. ಶ್ರಮದ ಬೆವರಿನ ಫಲ ಶಾಶ್ವತ ಹಾಗೂ ಸುಖದಾಯಕ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಧರ್ಮಗ್ರಂಥದಲ್ಲಿ ಬೋಧಿಸಿದ್ದಾರೆ. ಮನುಷ್ಯ ತನ್ನ ಸ್ವಾರ್ಥಕ್ಕಾಗಿ ಆದರ್ಶ ಮೌಲ್ಯಗಳನ್ನು ನಾಶಗೊಳಿಸಬಾರದು ಎಂದು ಹೇಳಿದರು.

ಚಲಗೇರಾ-ಮಾದನಹಿಪ್ಪರಗಿ ಹಿರೇಮಠದ ಶಾಂತವೀರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ನಾಗರಿಕತೆ ಹೆಸರಿನಲ್ಲಿ ನಾಡಿನ ಸಂಸ್ಕೃತಿ ಮತ್ತು ಸಭ್ಯತೆ ನಾಶವಾಗಬಾರದು. ಹಣ ಮತ್ತು ಅಧಿಕಾರದ ಚಿಂತನೆಯ ಜೊತೆಗೆ ದೇಶ, ಧರ್ಮ ಹಾಗೂ ಸಂಸ್ಕೃತಿಯ ಬಗ್ಗೆ ಮನುಷ್ಯ ಚಿಂತಿಸಬೇಕು ಎಂದರು.

ಜಾತ್ರಾ ಮಹೋತ್ಸವದ ಅಂಗವಾಗಿ ಐನಾಪುರ ಉಪಮನ್ಯು ಶಿವಾಚಾರ್ಯರಿಂದ ಗುಡ್ಡಾಪುರ ದಾನಮ್ಮ ದೇವಿ ಪುರಾಣ ನಡೆಯಿತು. ಜಂಗಮ ವಟುಗಳಿಗೆ ಅಯ್ಯಾಚಾರ ಶಿವದೀಕ್ಷೆ, ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಾಗೂ ವಿಶೇಷ ಪೂಜೆಗಳು ಜರುಗಿದವು.

ಮಾಜಿ ಶಾಸಕ ಸುಭಾಷ್ ಗುತ್ತೇದಾರ, ದುಧನಿ ನಗರಾಧ್ಯಕ್ಷ ಪ್ರಥಮೇಶ ಎಸ್. ಮೇತ್ರೆ, ತಡಕಲ್ ದತ್ತರಾಜ ಗುತ್ತೇದಾರ, ಕಲಬುರ್ಗಿಯ ಶಿವಶರಣಪ್ಪ ಸಿರಿ, ಕೇರೂರಿನ ರಾಹುಲ ಪಾಟೀಲ, ಗುಂಡೇರಾವ ಉದ್ದನಶೆಟ್ಟಿ ಸೇರಿದಂತೆ ಅನೇಕ ರಾಜಕೀಯ ಮುಖಂಡರು ಹಾಗೂ ಗಣ್ಯರು ಪಾಲ್ಗೊಂಡು ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

> "ಪ್ರಗತಿಪರ ಧ್ಯೇಯಗಳು ಮಾನವನ ಶ್ರೇಯಸ್ಸಿಗೆ ದಾರಿದೀಪ. ಸತ್ಯ, ಧರ್ಮ, ಶ್ರಮ ಹಾಗೂ ಸಮಾಜಮುಖಿ ಆದರ್ಶಗಳನ್ನು ಪಾಲಿಸುವುದೇ ಜೀವನದ ಉನ್ನತಿ."
> **– ರಂಭಾಪುರಿ ಜಗದ್ಗುರು. ಡಾ. ವೀರಸೋಮೇಶ್ವರ ಮಹಾಸ್ವಾಮಿಗಳು**

**ದಾಸೋಹ ನಿಲಯ ಉದ್ಘಾಟನೆ – ಭಕ್ತರಲ್ಲಿ ಹರ್ಷ**

ಚಲಗೇರಾ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ವೀರಭದ್ರೇಶ್ವರ ದಾಸೋಹ ನಿಲಯ ಉದ್ಘಾಟನೆಗೊಂಡಿರುವುದು ಭಕ್ತ ಸಮುದಾಯಕ್ಕೆ ಸಂತೋಷ ತಂದಿದೆ. ಮಠದ ಅಭಿವೃದ್ಧಿ ಕಾರ್ಯಗಳು ಜಗದ್ಗುರುಗಳ ಆಶೀರ್ವಾದದಿಂದ ಉತ್ತಮವಾಗಿ ಸಾಗುತ್ತಿವೆ ಎಂದು ಗಣ್ಯರು ಅಭಿಪ್ರಾಯಪಟ್ಟರು.

## ನಾಟಕ ಮನಸ್ಸಿನ ಮೇಲೆ ಪರಿಣಾಮ ಬೀರುವ ಮಾಧ್ಯಮ: ಮಿಥುನ ಪಾಟೀಲ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ದೃಶ್ಯ ಮಾಧ್ಯಮವು ಜನರ ಮನಸ್ಸಿನ ಮೇಲೆ ಅತ್ಯಂತ ಪರಿಣಾಮಕಾರಿಯಾಗಿ ಪ್ರಭಾವ ಬೀರುವ ಮಾಧ್ಯಮವಾಗಿದೆ. ಅದರಲ್ಲೂ ನಾಟಕಗಳಲ್ಲಿ ಬರುವ ಉತ್ತಮ ಸಂದೇಶಗಳು ವೀಕ್ಷಕರಿಗೆ ಸರಿ ದಾರಿ ತೋರುವ ಕೆಲಸವನ್ನು ಮಾಡುತ್ತವೆ ಎಂದು ರೋಣ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಪಾಟೀಲ ಹೇಳಿದರು.

ತೋಟಗಂಟಿ ಗ್ರಾಮದಲ್ಲಿ ಅನ್ನದಾನೇಶ್ವರ ಶಾಖಾ ಮಠದ 16ನೇ ವರ್ಷದ ರಥೋತ್ಸವದ ಅಂಗವಾಗಿ ಏರ್ಪಡಿಸಲಾಗಿದ್ದ ನಾಟಕ ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದ ಅವರು, ತಂತ್ರಜ್ಞಾನವಿಲ್ಲದ ದಿನಗಳಲ್ಲಿ ನಾಟಕಗಳು ಜನರಿಗೆ ಮನರಂಜನೆ ನೀಡುವಲ್ಲಿ ಮುಂಚೂಣಿಯಲ್ಲಿದ್ದವು. ನಾಟಕವು ಕಲಾವಿದರ ಮೂಲಕ ವೇದಿಕೆಯ ಮೇಲೆ ನಿಜವಾಗಿಯೂ ತೋರ್ಪಡಿಸುವ ಸನ್ನಿವೇಶಗಳಾಗಿವೆ. ಆದ್ದರಿಂದ ಸಮಾಜದ ಮೇಲೆ ಉತ್ತಮ ಪರಿಣಾಮ ಬೀರುತ್ತವೆ. ಇಲ್ಲಿನ ನಾಟಕ ಪ್ರದರ್ಶನದಲ್ಲಿ ಬರುವ ಪಾತ್ರಗಳಲ್ಲಿನ ಉತ್ತಮ ಅಂಶಗಳನ್ನು ಪ್ರೇಕ್ಷಕರು ನಿಜ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಆಧುನಿಕತೆ ಹಾವಳಿಯಿಂದಾಗಿ ಈ ಕಲೆ ನಶಿಸುತ್ತಿದೆ. ಅದನ್ನು ಉಳಿಸುವ ಜವಾಬ್ದಾರಿ ಪ್ರೇಕ್ಷಕರ ಮೇಲಿದೆ. ಗ್ರಾಮೀಣ ಕಲಾವಿದರೂ ಸಹ ನಾಟಕ ಪ್ರದರ್ಶಿಸುವ ಮೂಲಕ ರಂಗ ಕಲೆಯನ್ನು ಬೆಳೆಸಲು ಪ್ರಯತ್ನಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಆರ್. ಜಿ. ಪಾಟೀಲ, ಎ. ಆರ್. ಮಲ್ಲನಗೌಡ್ರ, ಗಂಗನಗೌಡ ಪಾಟೀಲ, ಬಸಯ್ಯ ಕಲ್ಮಠ, ಬಸವರಾಜ ಕುಂಬಾರ, ಉಮೇಶಗೌಡ ಪಾಟೀಲ, ಸಂಗನಗೌಡ ಹೀರೆಹಾಳ, ಮಲ್ಲನಗೌಡ ಬೂದಿಹಾಳ ಉಪಸ್ಥಿತರಿದ್ದರು.

ಸಾಮಾನ್ಯ ಸಭೆಯಲ್ಲಿ ಆರೋಗ್ಯ ಕೇಂದ್ರ, ಅಂಗನವಾಡಿ, ಪಶು ಚಿಕಿತ್ಸಾಲಯ ಸೇರಿದಂತೆ ವಿವಿಧ ಸಮಸ್ಯೆಗಳ ಚರ್ಚೆ

# ಪಿಎಚ್‌ಸಿ ಆವರಣದಲ್ಲಿ ದನ-ಕರುಗಳ ಸಂಚಾರ!



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಕಳೆದ ಹಲವು ವರ್ಷಗಳಿಂದ ಲಕ್ಕುಂಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ದನ-ಕರುಗಳು ನುಗ್ಗುವುದು ಹಾಗೂ ಪ್ರವೇಶದ್ವಾರದ ಮುಂದೆ ತಿಪ್ಪೆಗಳು ಜಮೆಯಾಗಿರುವುದು ಸಮಸ್ಯೆಯಾಗಿ ಪರಿಣಮಿಸಿದೆ. ಇದರಿಂದ ರೋಗಿಗಳು ಹಾಗೂ ಸಾರ್ವಜನಿಕರಿಗೆ ಸಂಚರಿಸಲು ತೊಂದರೆ ಉಂಟಾಗುತ್ತಿದ್ದು, ಆರೋಗ್ಯ ಕೇಂದ್ರದ ಪರಿಸರವನ್ನು ರಕ್ಷಿಸಲು ಗ್ರಾಮ ಪಂಚಾಯಿತಿ ಕ್ರಮ ಕೈಗೊಳ್ಳಬೇಕೆಂದು ಸಿಬ್ಬಂದಿ ಮನವಿ ಮಾಡಿದ್ದಾರೆ.

ಗ್ರಾಮದ ವಿವಿಧ ಸಮಸ್ಯೆಗಳು ಹಾಗೂ ಅಭಿವೃದ್ಧಿ ವಿಷಯಗಳ ಕುರಿತು ಗ್ರಾಮ ಪಂಚಾಯಿತಿಯಿಂದ ಕರೆಯಲಾಗಿದ್ದ ಸರ್ಕಾರಿ ಹಾಗೂ ಅರೆಸರ್ಕಾರಿ ಅಧಿಕಾರಿಗಳ ಸಾಮಾನ್ಯ ಸಭೆಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಲಾಯಿತು. ಆರೋಗ್ಯ ಕೇಂದ್ರದ ಆವರಣದಲ್ಲಿ ದನ-ಕರುಗಳು ನುಗ್ಗುವುದರಿಂದ ರೋಗಿಗಳಿಗೆ ತೊಂದರೆ ಆಗುತ್ತಿದೆ. ಜೊತೆಗೆ ಪ್ರವೇಶದ್ವಾರದ ಬಳಿ ಇರುವ ತಿಪ್ಪೆಗಳನ್ನು ತೆರವುಗೊಳಿಸುವುದು, ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವುದು ಹಾಗೂ ಮಹಿಳೆಯರಿಗೆ ಪ್ರತ್ಯೇಕ ರಕ್ತ ಪರೀಕ್ಷಾ ಕೊಠಡಿ ಕಲ್ಪಿಸುವ ಕುರಿತು ಅಧಿಕಾರಿಗಳಿಗೆ ಮನವಿ ಮಾಡಲಾಯಿತು. ಸಮಸ್ಯೆಯನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಭರವಸೆ ನೀಡಿದರು.

**ಅಂಗನವಾಡಿ ಸ್ಥಳಾಂತರ ಬೇಡಿಕೆ:** ಗ್ರಾಮದ ಅಂಗನವಾಡಿ ಕೇಂದ್ರ ಸಂಖ್ಯೆ 93 ಈಗ ಕೆ.ಜಿ.ಎಸ್. ಶಾಲೆಯ ಕಟ್ಟಡದಲ್ಲಿ ನಡೆಯುತ್ತಿದ್ದು, ಜೂನ್ ತಿಂಗಳವರೆಗೆ ಮಾತ್ರ ಸ್ಥಳಾವಕಾಶ ಇರುವುದರಿಂದ ಗ್ರಾಮ ಚವಡಿ ಎದುರಿನ ಜಾಗದಲ್ಲಿ ಹೊಸ ಕಟ್ಟಡ ನಿರ್ಮಿಸಿಕೊಡಬೇಕೆಂದು ಅಂಗನವಾಡಿ ಕಾರ್ಯಕರ್ತೆ ಯೋಗಿನಿ ಮನವಿ ಮಾಡಿದರು.

ಈ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯೊಂದಿಗೆ ಚರ್ಚಿಸಿ ಕಟ್ಟಡ ನಿರ್ಮಾಣಕ್ಕೆ ಅನುದಾನ ಕುರಿತು ಕ್ರಮ ಕೈಗೊಳ್ಳಲಾಗುವುದು. ಅಲ್ಲಿಯವರೆಗೆ ಗ್ರಾಮ ಚವಡಿಯಲ್ಲಿ ಅಂಗನವಾಡಿ ನಡೆಸಲು ಗ್ರಾಮ ಲೆಕ್ಕಾಧಿಕಾರಿಗಳೊಂದಿಗೆ ಮಾತುಕತೆ ನಡೆಸಲಾಗುವುದು ಎಂದು ಆಡಳಿತಾಧಿಕಾರಿ ಶರಣು ಗೋಗೇರಿ ಹೇಳಿದರು. ಅಂಗನವಾಡಿಯಲ್ಲಿ ಕುಡಿಯುವ ನೀರು ಹಾಗೂ ಸ್ವಚ್ಛತೆ ಸಮಸ್ಯೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

**ಮಹಿಳಾ ಸಂಜೀವಿನಿ ಒಕ್ಕೂಟಕ್ಕೆ ಕಟ್ಟಡ ಬೇಡಿಕೆ:** ಗ್ರಾಮ ಪಂಚಾಯಿತಿ ಮಟ್ಟದ ಮಹಿಳಾ ಸಂಜೀವಿನಿ ಒಕ್ಕೂಟದ ಚಂದ್ರಕಲಾ ಮಾಡಲಗೇರಿ ಮಾತನಾಡಿ, ಸಂಘವು ಮಹಿಳೆಯರಿಗೆ ಸಾಲ ಸೌಲಭ್ಯ ನೀಡಿ ಸ್ವಾವಲಂಬಿ ಜೀವನ ನಡೆಸಲು ನೆರವಾಗುತ್ತಿದೆ. ಸಂಘದ ಚಟುವಟಿಕೆಗಳಿಗೆ ನಿವೇಶನ ಒದಗಿಸಿ ಕಟ್ಟಡ ನಿರ್ಮಿಸಿಕೊಡಬೇಕು ಎಂದು ಒತ್ತಾಯಿಸಿದರು.

ಸಭೆಯಲ್ಲಿ ಶಾಲೆಗಳ ಪರಿಸರ, ಮೂಲಸೌಕರ್ಯ, ರಸ್ತೆ ಅಭಿವೃದ್ಧಿ, ಮನರೇಗಾ ಹಾಗೂ ವಿವಿಧ ಯೋಜನೆಗಳ ಕುರಿತು ಚರ್ಚೆ ನಡೆಯಿತು. ಸಾರ್ವಜನಿಕರಿಂದ ಬಂದ ಅರ್ಜಿಗಳನ್ನು ಸಭೆಯಲ್ಲಿ ಓದಿ ಕೇಳಿಸಲಾಯಿತು.

**ಸ್ವಚ್ಛತೆ ಮತ್ತು ಅಭಿವೃದ್ಧಿಗೆ ಸಹಕಾರ ಅಗತ್ಯ:** ಸಭೆಯ ಅಧ್ಯಕ್ಷತೆ ವಹಿಸಿದ್ದ ಆಡಳಿತಾಧಿಕಾರಿ ಶರಣು ಗೋಗೇರಿ ಮಾತನಾಡಿ, ಅಂಗನವಾಡಿ ಕಾರ್ಯಕರ್ತರು ಸರ್ಕಾರದ ಅನುದಾನದ ಜೊತೆ-ಗೆ ಸಾರ್ವಜನಿಕರ ಸಹಕಾರ ಪಡೆದು ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದ ದೊಡ್ಡ ಗೇಟಿಗೆ ಬೀಗ ಹಾಕಿ ಸಣ್ಣ ಗೇಟು ನಿರ್ಮಿಸುವ ಬಗ್ಗೆ ಹಾಗೂ ತಿಪ್ಪೆಗಳನ್ನು ತೆರವುಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದರು. ಗ್ರಾಮದ ಸುತ್ತಮುತ್ತಲಿನ ಹತ್ತು ಗ್ರಾಮಗಳಿಗೆ ಅನುಕೂಲವಾಗುವಂತೆ ಪಶು ಚಿಕಿತ್ಸಾಲಯ ಕಟ್ಟಡ ನಿರ್ಮಿಸಲು ಸರ್ಕಾರ ಅನುದಾನ ಮಂಜೂರು ಮಾಡಿದೆ. ಈ ಜಾಗದಲ್ಲಿರುವ ಬಣವಿ ಮತ್ತು ತಿಪ್ಪೆಗಳನ್ನು ತೆರವುಗೊಳಿಸಲು ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಲಕ್ಕುಂಡಿ ಗ್ರಾಮವು ವಿಶ್ವ ಪರಂಪರೆ ಪಟ್ಟಿಗೆ ಸೇರಲು ಸರ್ಕಾರ ಪ್ರಯತ್ನ ನಡೆಸುತ್ತಿದ್ದು, ಸ್ಮಾರಕಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡಲು ಗ್ರಾಮಸ್ಥರು ಸಹಕರಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸದಸ್ಯ ಸಿದ್ಧಲಿಂಗೇಶ್ವರ ಪಾಟೀಲ, ಪಿಡಿಒ ಅಮೀರನಾಯಕ, ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ವೈ.ಎಚ್. ತೆಕ್ಕಲಕೋಟಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಮಹೇಶ್ ಮುಸ್ಕಿನಭಾವಿ, ಪಿಎಚ್‌ಸಿ ವೈದ್ಯೆ ಡಾ. ನಿವೇದಿತಾ ಬಡಿಗೇರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತರು, ಮಹಿಳಾ ಸಂಜೀವಿನಿ ಒಕ್ಕೂಟದ ಸದಸ್ಯರು ಉಪಸ್ಥಿತರಿದ್ದರು.

"ಲಕ್ಕುಂಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ದನ-ಕರುಗಳ ಸಂಚಾರ ಮತ್ತು ತಿಪ್ಪೆಗಳ ಸಮಸ್ಯೆಯಿಂದ ರೋಗಿಗಳಿಗೆ ತೊಂದರೆ ಉಂಟಾಗಿದೆ. ಪರಿಸರವನ್ನು ಸ್ವಚ್ಛವಾಗಿಡಲು ದೊಡ್ಡ ಗೇಟಿಗೆ ಬೀಗ ಹಾಕಿ ಸಣ್ಣ ಗೇಟು ನಿರ್ಮಿಸುವುದು ಹಾಗೂ ತಿಪ್ಪೆಗಳನ್ನು ತೆರವುಗೊಳಿಸುವ ಬಗ್ಗೆ ಶೀಘ್ರ ಕ್ರಮ ಕೈಗೊಳ್ಳಲಾಗುತ್ತದೆ."

– **ಶರಣು ಗೋಗೇರಿ,** ಆಡಳಿತಾಧಿಕಾರಿ.

**ಪಶು ಚಿಕಿತ್ಸಾಲಯಕ್ಕೆ ನಿವೇಶನ ತೆರವುಗೊಳಿಸಲು ಮನವಿ**

ಗ್ರಾಮದ ಕದಂಪೂರ ರಸ್ತೆಗೆ ಹೊಂದಿಕೊಂಡಿರುವ ಗ್ರಾಮ ಪಂಚಾಯಿತಿ ಜಾಗದಲ್ಲಿ ಸಾರ್ವಜನಿಕರು ಬಣವಿ ಮತ್ತು ತಿಪ್ಪೆಗಳನ್ನು ಹಾಕಿಕೊಂಡಿದ್ದು, ಅದನ್ನು ತೆರವುಗೊಳಿಸಿ ಪಶು ಚಿಕಿತ್ಸಾಲಯ ಕಟ್ಟಡ ನಿರ್ಮಾಣಕ್ಕೆ ಅವಕಾಶ ಮಾಡಿಕೊಡಬೇಕೆಂದು ಅಧಿಕಾರಿಗಳು ಮನವಿ ಮಾಡಿದ್ದಾರೆ. ಸರ್ಕಾರದಿಂದ ಅನುದಾನ ಬಿಡುಗಡೆಯಾಗಿರುವುದರಿಂದ ಶೀಘ್ರದಲ್ಲಿ ಕಟ್ಟಡ ನಿರ್ಮಾಣವಾಗಬೇಕು, ಇಲ್ಲವಾದರೆ ಅನುದಾನ ವಾಪಸ್ ಹೋಗುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ. ರೈತರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಆಡಳಿತಾಧಿಕಾರಿ ಹಾಗೂ ಪಿಡಿಒ ತಿಳಿಸಿದ್ದಾರೆ.



## ಯುಗಾದಿ ಕವಿಗೋಷ್ಠಿ, ಸಾಹಿತ್ಯೋತ್ಸವಕ್ಕೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಡಾ. ದ.ರಾ.ಬೇಂದ್ರೆ ರಾಷ್ಟ್ರಿಯ ಸ್ಮಾರಕ ಟ್ರಸ್ಟ್ ಯುಗಾದಿ ಕವಿಗೋಷ್ಠಿ ಹಾಗೂ ದ.ರಾ.ಬೇಂದ್ರೆ ಗೀತಾಯನ ಕಾರ್ಯಕ್ರಮವನ್ನು ಮಾರ್ಚ್ 15, 2026 ಬೆಳಿಗ್ಗೆ 10:30ಕ್ಕೆ ಧಾರವಾಡದ ಡಾ. ದ.ರಾ.ಬೇಂದ್ರೆ ಭವನದಲ್ಲಿ ಆಯೋಜಿಸಲಾಗಿದೆ.

ಹಿರಿಯ ಕವಿಯತ್ರಿ ಡಾ. ಹೇಮಾ ಪಟ್ಟಣಶೆಟ್ಟಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಅಧ್ಯಕ್ಷತೆಯನ್ನು ಟ್ರಸ್ಟ್ ಅಧ್ಯಕ್ಷರಾದ ಡಾ. ಸರಜೂ ಕಾಟ್ಕರ್ ವಹಿಸಲಿದ್ದಾರೆ. ಡಾ.ವಾಯ್. ಎಂ.ಯಾಕೊಳ್ಳಿ ಮತ್ತು ಡಾ. ಶರಣಮ್ಮ ಗೊರೇಬಾಳ, ಯುಗಾದಿ ಕವಿಗೋಷ್ಠಿಯ ಸಂಚಾಲಕರು ಉಪಸ್ಥಿತಿ ಇರಲಿದ್ದಾರೆ.

ಕಾರ್ಯಕ್ರಮದಲ್ಲಿ ಸಿ.ಎಂ. ಚನ್ನಬಸಪ್ಪ, ಶ್ರೀವಲ್ಲಭ ಕುಲಕರ್ಣಿ, ಡಾ. ನಾಗರೇಖಾ ಗಾಂವಕರ, ಡಾ. ಸಂತೋಷ ನಾಯಿಕ, ಅನಿತಾ ಮಂಜುನಾಥ, ಸುಮಾ ಕಾಟ್ಕರ್, ವಿನೂತಾ ಹಂಚಿನಮನಿ, ಡಾ. ಶೇಖರ್ ಸಜ್ಜನ್, ಸಂಪತ್‌ಕುಮಾರ ಕಿಚಡಿ, ಹೆಬಸೂರು ರಂಜಾನ್, ನಾಗೇಶ ನಾಯಕ, ಆನಂದ ಭೋವಿ, ರಾಜಶೇಖರ ಬಿರಾದಾರ, ವಿಠ್ಠಲ ದಳವಾಯಿ, ಜೋಸಫ್ ಮಲ್ಲಾಡಿ, ಡಾ. ಮಲ್ಲಿಕಾರ್ಜುನ ಛಬ್ಬಿ, ಶ್ರೀಶೈಲ ಹೆಬ್ಬಳ್ಳಿ, ಪ್ರಕಾಶ ಕಡಮೆ, ಗಾಯತ್ರಿ ರವಿ, ರಾಮಚಂದ್ರ ಕುಲಕರ್ಣಿ ಪಾಲ್ಗೊಳ್ಳಲಿದ್ದಾರೆ.

## ನಾಳೆ ಹಗರಿಬೊಮ್ಮನಹಳ್ಳಿ ತಾಲೂಕಿನಲ್ಲಿ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ವಿವಿಧ ಭಾಗಗಳಲ್ಲಿ ಮಾರ್ಚ್ 15, 2026ರಂದು ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಜೆಇಎಸ್ಕಾಂ) ಹಗರಿಬೊಮ್ಮನಹಳ್ಳಿ ಕಾರ್ಯಾಲಯ ತಿಳಿಸಿದೆ.

ನಿರ್ವಹಣಾ ಹಾಗೂ ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳುವ ಹಿನ್ನೆಲೆಯಲ್ಲಿ ಬೆಳಿಗ್ಗೆ 7:00 ಗಂಟೆಯಿಂದ ಮಧ್ಯಾಹ್ನ 2:00 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

66/11 ಕೆವಿ ವಿದ್ಯುತ್ ಉಪಕೇಂದ್ರ ಹಾಗೂ ಸಂಬಂಧಿತ ಲೈನ್‌ಗಳಲ್ಲಿ ತಾಂತ್ರಿಕ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿರುವುದರಿಂದ ಹಗರಿಬೊಮ್ಮನಹಳ್ಳಿ ಪಟ್ಟಣ ಸೇರಿದಂತೆ ಹಳೆ ಹಗರಿಬೊಮ್ಮನಹಳ್ಳಿ, ಚಿಂತ್ರಪಳ್ಳಿ, ಕೆಚ್ಚಿನ ಬಂಡಿ, ಬಲ್ಲಾ ಹುಣಿಸಿ, ಬಂಡಿಹಳ್ಳಿ, ಬಿ. ಮುತ್ಕೂರು, ಸೂಬಟಿ, ಕತ್ಯಾನಮರಡಿ, ಕೆ. ಓಬಳಾಪುರ, ಬ್ಯಾಲಾಳು, ಕಡಲಬಾಳು, ಹರೇಗೊಂಡನಹಳ್ಳಿ, ಮಾಲವಿ, ವರಲಹಳ್ಳಿ, ವಟ್ಟಮ್ಮನಹಳ್ಳಿ, ಯಡ್ರಮ್ಮನಹಳ್ಳಿ, ಹಿರೇಸೊಬಟಿ, ಚಿಕ್ಕಸೊಬಟಿ, ಬಂಡಿಸೊಬಟಿ, ಎಂಬಿ ಕಾಲೋನಿ, ಬ್ಯಾಸಗಿದೇರಿ, ಮುಟಗನಹಳ್ಳಿ, ಶಿವನಂದನಗರ, ಬಾಚಿಗೊಂಡನಹಳ್ಳಿ 1, ಬಾಚಿಗೊಂಡನಹಳ್ಳಿ 2, ಹಗರಿ ಕ್ಯಾದಿಗಿಹಳ್ಳಿ ಹಾಗೂ ಆಡವಿ ಆನಂದ ದೇವನಹಳ್ಳಿ ಗ್ರಾಮಗಳಲ್ಲಿ ತಾತ್ಕಾಲಿಕವಾಗಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ಆದ್ದರಿಂದ ಸಾರ್ವಜನಿಕರು ಹಾಗೂ ಗ್ರಾಹಕರು ಸಹಕರಿಸುವಂತೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ವಿದ್ಯುತ್ ಕಾರ್ಯ ಮತ್ತು ಪಾಲನ ವಿಭಾಗ, ಜೆಇಎಸ್ಕಾಂ ಹಗರಿಬೊಮ್ಮನಹಳ್ಳಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

## ಗೃಹಬಳಕೆ ಸಿಲಿಂಡರ್ ದಾಸ್ತಾನಿದ್ದು, ಗ್ರಾಹಕರು ಸುಳ್ಳು ವದಂತಿಗಳನ್ನು ನಂಬಬಾರದು!



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ಗೃಹಬಳಕೆ ಸಿಲಿಂಡರ್ ದಾಸ್ತಾನಿದ್ದು, ಗ್ರಾಹಕರು ಸುಳ್ಳು ವದಂತಿಗಳನ್ನು ನಂಬಬಾರದು. ಗೃಹಬಳಕೆ ಸಿಲಿಂಡರ್‌ಗಳನ್ನು ವಾಣಿಜ್ಯ ಬಳಕೆಗೆ ಉಪಯೋಗಿಸಬಾರದು. ಯಾವುದೇ ಸಮಸ್ಯೆಗಳಿದ್ದಲ್ಲಿ ಅಧಿಕಾರಿಗಳನ್ನು ಸಂಪರ್ಕಿಸಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ತಿಳಿಸಿದ್ದಾರೆ.

ಜಿಲ್ಲೆಯ ಸಾರ್ವಜನಿಕರು, ಗೃಹಬಳಕೆ ಅಡಿಗೆ ಅನಿಲ ಗ್ರಾಹಕರು ಸಾಮಾಜಿಕ ಜಾಲ ತಾಣಗಳಲ್ಲಿ ಹರಿದಾಡುತ್ತಿರುವ ವದಂತಿಗಳಿಗೆ ಕಿವಿಗೊಡಬಾರದು. ದೇಶಾದ್ಯಂತ ಎಲ್‌ಪಿಜಿ ಉತ್ಪಾದನೆ ಮತ್ತು ಬಾಟಲಿಂಗ್ ಎರಡೂ ಹೆಚ್ಚಿರುವುದರಿಂದ ಸಾಕಷ್ಟು ಪ್ರಮಾಣದಲ್ಲಿ ಸದ್ಯ ಸಿಲಿಂಡರ್‌ಗಳ ದಾಸ್ತಾನು ಲಭ್ಯವಿದೆ ಎಂದು ಹೇಳಿದ್ದಾರೆ.

## ನಾಳೆ ವಿವಿಧ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

ದಿ.15.03.2026 ರಂದು 110 ಕೆವಿ ಮುಂಡರಗಿ, ಡಂಬಳ ಮತ್ತು ಶಿಂಗಟಾಲೂರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಇದರ ಪರಿಣಾಮವಾಗಿ ಮುಂಜಾನೆ 10:00 ಗಂಟೆಯಿಂದ ಸಂಜೆ 6:00 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಈ ಉಪಕೇಂದ್ರಗಳಿಂದ ಪೂರೈಕೆಯಾಗುವ 110 ಕೆವಿ ವಿಜಯನಗರ ಶುಗರ್ಸ್, ಬೀಡನಾಳ ನೀರಾವರಿ, 33 ಕೆವಿ ನೀರು ಸರಬರಾಜು ಶಿಂಗಟಾಲೂರ, ಕೆಎನ್‌ಎನ್‌ಎಲ್, ಎನರ್ಕಾನ್ ವಿಂಡ್, ಸುಜಲಾನ್ ವಿಂಡ್, ಚುರ್ಚಿಹಾಳ, ಅಖಿಲಗ್ಯಾ ಸೋಲಾರ್ ಸೇರಿದಂತೆ ನಗರ, ಕೈಗಾರಿಕಾ ಹಾಗೂ ನೀರಾವರಿ ಪಂಪಸೆಟ್ ಮಾರ್ಗಗಳು, ಕುಡಿಯುವ ನೀರು ಸರಬರಾಜು ಹಾಗೂ ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಆದ್ದರಿಂದ ಸಾರ್ವಜನಿಕರು ಈ ಕುರಿತು ಗಮನಿಸಿ ವಿದ್ಯುತ್ ಕಂಪನಿಯೊಂದಿಗೆ ಸಹಕರಿಸುವಂತೆ ಪ್ರಕಟಣೆಯಲ್ಲಿ ವಿನಂತಿಸಲಾಗಿದೆ.

## ಶಿವಶಾಂತವೀರ ಮಹಾಶಿವಯೋಗಿಗಳ 23ನೇ ಪುಣ್ಯಾರಾಧನೆ: ಸಹಸ್ರಾರು ಭಕ್ತರ ಪಾದಯಾತ್ರೆ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಸಂಸ್ಥಾನ ಶ್ರೀ ಗವಿಮಠದ ಮ.ನಿ.ಪ್ರ.ಜ. ಶಿವಶಾಂತವೀರ ಮಹಾಶಿವಯೋಗಿಗಳ 23ನೇ ಪುಣ್ಯಾರಾಧನೆ ಅಂಗವಾಗಿ ಗುರುವಾರ ಬೆಳಿಗ್ಗೆ 6 ಗಂಟೆಗೆ ಭಕ್ತರ ಭಕ್ತಿಭಾವದ ಪಾದಯಾತ್ರೆ ಜರುಗಿತು.

ಪಾದಯಾತ್ರೆಯನ್ನು ಪರಮ ಪೂಜ್ಯ ಶ್ರೀ ಮ.ನಿ.ಪ್ರ.ಜ. ಗವಿಸಿದ್ಧೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ಶ್ರೀ ಮಳೆಮಲ್ಲೇಶ್ವರ ದೇವಸ್ಥಾನದಿಂದ ಪ್ರಾರಂಭಿಸಲಾಯಿತು. ಅಶೋಕ್ ಸರ್ಕಲ್ ಹಾಗೂ ಗಡಿಯಾರ ಕಂಬದ ಮೂಲಕ ಸಾಗಿದ ಪಾದಯಾತ್ರೆ ಬೆಳಿಗ್ಗೆ 9 ಗಂಟೆಗೆ ಶ್ರೀ ಗವಿಮಠಕ್ಕೆ ತಲುಪಿತು. ಈ ಸಂದರ್ಭದಲ್ಲಿ ಬಳಗಾನೂರಿನ ಶ್ರೀ ಶಿವಶಾಂತವೀರ ಶರಣರು, ಹೂವಿನಹಡಗಲಿಯ ಶ್ರೀ ಡಾ. ಹಿರಿಶಾಂತವೀರ ಮಹಾಸ್ವಾಮಿಗಳು, ಕಡಲಬಾಳಿನ ಶ್ರೀ ಮರಿಶಾಂತವೀರ ಮಹಾಸ್ವಾಮಿಗಳು, ಬಿಸರಳ್ಳಿಯ ಶ್ರೀ ಶಿವಶಾಂತವೀರ ಮಹಾಸ್ವಾಮಿಗಳು, ಚಿಕ್ಕಮ್ಯಾಗೇರಿ ಮೇಲುಗದ್ದುಗೆ ಹಿರೇಮಠದ ಶ್ರೀ ಗುರುಶಾಂತವೀರ ಸ್ವಾಮಿಗಳು ಸೇರಿದಂತೆ ನಗರ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಸಹಸ್ರಾರು ಭಕ್ತರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ಶಿಬಿರ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಜನರ ಸೇವೆಯನ್ನು ಜನಾರ್ದನ ಸೇವೆಯೆಂದು ಭಾವಿಸಿ, ಪ್ರತಿದಿನ ಬೆಳಗ್ಗೆಯೇ ಸ್ವಚ್ಛತಾ ಕಾರ್ಯಗಳಲ್ಲಿ ತೊಡಗಿ ಸಾರ್ವಜನಿಕರ ಆರೋಗ್ಯ ಕಾಪಾಡುವ ಪೌರಕಾರ್ಮಿಕರಿಗಾಗಿ ಆರೋಗ್ಯ ತಪಾಸಣೆ ನಡೆಸಲಾಯಿತು.

ಹಗರಿಬೊಮ್ಮನಹಳ್ಳಿ ತಾಲೂಕು ಆಸ್ಪತ್ರೆಯಲ್ಲಿ ಪುರಸಭೆಯ ಪೌರಕಾರ್ಮಿಕರಿಗೆ ಉಚಿತ ಆರೋಗ್ಯ ತಪಾಸಣೆ ನಡೆಸಿ ಅಗತ್ಯ ಔಷಧಿಗಳನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ಪುರಸಭೆ ಪೌರಕಾರ್ಮಿಕರ ಸೂಪರ್‌ವೈಸರ್ ಹಾಗೂ ರಾಜ್ಯ ಪೌರ ನೌಕರರ ಸಂಘದ ರಾಜ್ಯಾಧ್ಯಕ್ಷ ಕೆ. ಪ್ರಭಾಕರ್ ಮಾತನಾಡಿ, ಪೌರಕಾರ್ಮಿಕರು ತಮ್ಮ ಆರೋಗ್ಯವನ್ನು ನಿರ್ಲಕ್ಷಿಸದೆ ಕಾಪಾಡಿಕೊಳ್ಳಬೇಕು.

ಕೆಲಸದ ಒತ್ತಡದಿಂದ ಆರೋಗ್ಯದ ಬಗ್ಗೆ ಗಮನ ಕೊಡದೆ ಅನಾರೋಗ್ಯಕ್ಕೆ ಒಳಗಾಗಬಾರದು. ಸರ್ಕಾರದ ಆಸ್ಪತ್ರೆಗಳಲ್ಲಿ ಉಚಿತವಾಗಿ ತಪಾಸಣೆ ಮತ್ತು ಔಷಧಿಗಳು ನೀಡಲಾಗುತ್ತಿದ್ದು, ಕಾರ್ಮಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪುರಸಭೆ ಹೆಲ್ತ್ ಇನ್ಸ್‌ಪೆಕ್ಟರ್ ಜಯಲಕ್ಷ್ಮಿ, ಎಚ್. ವೀರಣ್ಣ, ನಿರ್ಮಲ ಮೇಸ್ತ್ರಿ, ಎಚ್. ವನಜಾಕ್ಷಿ, ಕಮ್ಯುನಿಟಿ ಮೊಬೈಲೈಜರ್, ಪೌರಕಾರ್ಮಿಕ ಸಿಬ್ಬಂದಿಗಳಾದ ಸುಗುಣಮ್ಮ, ಸುಂಕಮ್ಮ, ಸುವರ್ತಮ್ಮ, ಗಂಗಮ್ಮ, ಶೇಖರಪ್ಪ, ಯಮುನಪ್ಪ ಹಾಗೂ ಆಸ್ಪತ್ರೆ ಸಿಬ್ಬಂದಿ ಮತ್ತು ಹಲವಾರು ಕಾರ್ಮಿಕರು ಭಾಗವಹಿಸಿದ್ದರು.

## ಗ್ರಾಮೀಣ ಶಾಲೆಗಳನ್ನು ವಿಲೀನದ ಹೆಸರಿನಲ್ಲಿ ಮುಚ್ಚಬೇಡಿ: ಎಸ್‌ಎಫ್‌ಐ ಆಕ್ರೋಶ




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಹಗರಿಬೊಮ್ಮನಹಳ್ಳಿ ತಾಲೂಕಿನ ಗುಳೆದಾಳು ಹಾಗೂ ಓಬಳಾಪುರ ಗ್ರಾಮದ ಸರ್ಕಾರಿ ಶಾಲೆಗಳನ್ನು ಕೆಪಿಎಸ್ ಮ್ಯಾಗ್ನೆಟಿಕ್ ಶಾಲೆಗಳೊಂದಿಗೆ ವಿಲೀನಗೊಳಿಸುವ ಹೆಸರಿನಲ್ಲಿ ಮುಚ್ಚುವ ಕ್ರಮವನ್ನು ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ಹಗರಿಬೊಮ್ಮನಹಳ್ಳಿ ತಾಲೂಕು ಸಮಿತಿ ತೀವ್ರವಾಗಿ ಖಂಡಿಸಿದೆ.

ಎಸ್‌ಎಫ್‌ಐ ನೇತೃತ್ವದಲ್ಲಿ ಗುಳೆದಾಳು ಮತ್ತು ಓಬಳಾಪುರ ಗ್ರಾಮಸ್ಥರು ಸೇರಿ "ನಮ್ಮ ಗ್ರಾಮದ ಶಾಲೆಗಳು ನಮ್ಮ ಊರಲ್ಲೇ ಉಳಿಯಬೇಕು, ಬೆಳೆಯಬೇಕು" ಎಂಬ ಘೋಷಣೆಗಳೊಂದಿಗೆ ಪ್ರತಿಭಟನೆ ನಡೆಸಿದರು. ಗ್ರಾಮೀಣ ಶಾಲೆಗಳನ್ನು ಕೆಪಿಎಸ್ ಶಾಲೆಗಳಾಗಿ ಉನ್ನತೀಕರಿಸುವ ನೆಪದಲ್ಲಿ ವಿಲೀನಗೊಳಿಸಿ ಮುಚ್ಚುವ ಕ್ರಮವನ್ನು ವಿರೋಧಿಸಿ ಗ್ರಾಮಸ್ಥರು ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

"ಸರ್ಕಾರ ಶಿಕ್ಷಣ ವಿರೋಧಿ ನೀತಿಯನ್ನು ಜಾರಿಗೆ ತರುತ್ತಿದೆ. ಗ್ರಾಮೀಣ ಭಾಗದ ಶಾಲೆಗಳನ್ನು ಮುಚ್ಚುವುದು ಬಡ ಮಕ್ಕಳ ಶಿಕ್ಷಣ ಹಕ್ಕನ್ನು ಕಸಿದುಕೊಳ್ಳುವಂತಾಗಿದೆ. ಶಿಕ್ಷಣವನ್ನು ಖಾಸಗೀಕರಣದತ್ತ ಒಯ್ಯುವ ಈ ಧೋರಣೆಯನ್ನು ಎಸ್‌ಎಫ್‌ಐ ತೀವ್ರವಾಗಿ ವಿರೋಧಿಸುತ್ತದೆ."

– **ಜಯಸೂರ್ಯ, ಎಸ್‌ಎಫ್‌ಐ,** ವಿಜಯನಗರ ಜಿಲ್ಲಾ ಅಧ್ಯಕ್ಷರು.

ಭೌಗೋಳಿಕ ಹಾಗೂ ಶೈಕ್ಷಣಿಕ ಸಮಸ್ಯೆಗಳ ಕುರಿತು ವಿವರಿಸಿ, ಶಾಲೆಗಳನ್ನು ಉಳಿಸಬೇಕು ಎಂಬ ಬೇಡಿಕೆಯನ್ನು ಮಾನ್ಯ ಮುಖ್ಯಗುರುಗಳು ಹಾಗೂ ಎಸ್‌ಡಿಎಂಸಿ ಸಮಿತಿಯ ಮೂಲಕ ರಾಜ್ಯ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಗುಳೆದಾಳು ಗ್ರಾಮದ ಕೃಷ್ಣಪ್ಪ, ಎಕೆ ದುರ್ಗೇಶ, ನಿಂಗರಾಜ, ಧರ್ಮಪ್ಪ ಪೂಜಾರಿ, ರಮೇಶ್, ಪದ್ದಮ್ಮ, ಸುಮಂಗಳ, ಗಂಗಮ್ಮ, ಗುಂಡ್ರ ನಿಂಗಜ್ಜ, ತಳವಾರ್ ಹೇಮಣ್ಣ, ಜಟಂಗಿ ಶಿವಣ್ಣ, ಬಣಕಾರ್ ಮಲ್ಲೇಶ, ವೆಂಕಟೇಶ, ಮಹಾಂತೇಶ, ಹೆಚ್ ಗೋಣಿ ಸ್ವಾಮಿ, ಕಲ್ಲೇಶ, ಅವಾಜಿ ಬಸವರಾಜ ಹಾಗೂ ಓಬಳಾಪುರ ಗ್ರಾಮದ ನರಸಿಂಹರಾಜ, ರಮೇಶ್, ಕರಿಯಪ್ಪ, ಹನುಮಂತಸ್ವಾಮಿ, ತಿಪ್ಪೇಸ್ವಾಮಿ, ಬಸವರಾಜ, ಕುಮಾರಪ್ಪ, ನಾಗರಾಜ, ಜ್ಞಾನೇಶ, ಪವಾಡಪ್ಪ ಸೇರಿದಂತೆ ಅನೇಕರು ಹೋರಾಟದಲ್ಲಿ ಭಾಗವಹಿಸಿದ್ದರು.

## ಮಾ.16ರಂದು ಆಯವ್ಯಯ ಅಂದಾಜು ಪತ್ರಿಕೆ ಮಂಜೂರಾತಿ ಸಭೆ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ 2025-26ನೇ ಸಾಲಿನ ಪರಿಷ್ಕೃತ ಆಯವ್ಯಯ ಹಾಗೂ 2026-27ನೇ ಸಾಲಿನ ಆಯವ್ಯಯ ಅಂದಾಜು ಪತ್ರಿಕೆ ಮಂಜೂರಾತಿ ಕುರಿತ ಸಾಮಾನ್ಯ ಸಭೆಯನ್ನು ಮಾ.16ರಂದು ಬೆಳಿಗ್ಗೆ 11ಕ್ಕೆ ಪಾಲಿಕೆಯ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಜೊತೆಗೆ 24/7 ನಿರಂತರ ನೀರು ಸರಬರಾಜು ಯೋಜನೆಯಾದ ಕರ್ನಾಟಕ ನಗರ ನೀರು ಸರಬರಾಜು ಆಧುನೀಕರಣ ಯೋಜನೆ (ಕುಸ್ಸೆಂಪ್)ಯ ಆಯವ್ಯಯ ಅಂದಾಜು ಪತ್ರಿಕೆಗೂ ಮಂಜೂರಾತಿ ಪಡೆಯಲಾಗುತ್ತದೆ ಎಂದು ಪಾಲಿಕೆಯ ಪರಿಷತ್ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ದೂರ ಶಿಕ್ಷಣ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಿಂದ 2025-26ನೇ ಸಾಲಿನ ಜನವರಿ ಆವೃತ್ತಿಗೆ ಬಿ.ಎ., ಬಿ.ಕಾಂ., ಬಿ.ಎಸ್ಸಿ., ಬಿ.ಬಿ.ಎ., ಬಿ.ಸಿ.ಎ. ಸೇರಿದಂತೆ ವಿವಿಧ ಪದವಿ, ಸ್ನಾತಕೋತ್ತರ, ಡಿಪ್ಲೋಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರವೇಶಾತಿ ಪ್ರಾರಂಭವಾಗಿದೆ.

ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಅಮರಗೋಳದ ಪ್ರಾದೇಶಿಕ ಕೇಂದ್ರವನ್ನು ಸಂಪರ್ಕಿಸಬಹುದು ಎಂದು ಪ್ರಾದೇಶಿಕ ನಿರ್ದೇಶಕ ಡಾ. ಲೋಕೇಶ ಆರ್. ತಿಳಿಸಿದ್ದಾರೆ.

**90 ಗ್ರಾಮಗಳಲ್ಲಿ ನೀರಿನ ಕೊರತೆ ಸಾಧ್ಯತೆ – 8 ಗ್ರಾಮಗಳಿಗೆ ಖಾಸಗಿ ಬೋರ್‌ವೆಲ್ ಮೂಲಕ ನೀರು ಸರಬರಾಜು**

# ಬೇಸಿಗೆಗೆ ಮುನ್ನ ಧಾರವಾಡ ಜಿಲ್ಲೆಯಲ್ಲಿ ಮುನ್ನೆಚ್ಚರಿಕೆ ಕ್ರಮ



"ಬೇಸಿಗೆ ವೇಳೆ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಎಲ್ಲಾ ತಾಲೂಕುಗಳಲ್ಲಿ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಸಾರ್ವಜನಿಕರು ಯಾವುದೇ ಸಮಸ್ಯೆ ಎದುರಾದರೆ ತಕ್ಷಣ ಸಹಾಯವಾಣಿ ಸಂಪರ್ಕಿಸಬೇಕು."
– **ಸ್ನೇಹಲ್ ಆರ್**, ಜಿಲ್ಲಾಧಿಕಾರಿ.

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಬೇಸಿಗೆ ತೀವ್ರಗೊಳ್ಳುವ ಹಿನ್ನೆಲೆ ಕುಡಿಯುವ ನೀರಿನ ಕೊರತೆಯನ್ನು ಎದುರಿಸಲು ಧಾರವಾಡ ಜಿಲ್ಲೆಯಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದೆ. ಮಾರ್ಚ್, ಎಪ್ರಿಲ್ ಮತ್ತು ಮೇ ತಿಂಗಳಲ್ಲಿ ಜಿಲ್ಲೆಯ ಸುಮಾರು 90 ಗ್ರಾಮಗಳಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗುವ ಸಾಧ್ಯತೆ ಇದೆ ಎಂದು ಅಂದಾಜಿಸಲಾಗಿದೆ.

ಜಿಲ್ಲಾಧಿಕಾರಿ ಕಚೇರಿಯ ನೂತನ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸ್ನೇಹಲ್ ಆರ್ ಅವರು, ತಹಶೀಲ್ದಾರರು ಮತ್ತು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಲು ಸೂಚಿಸಿದರು.

ಪ್ರಸ್ತುತ ಜಿಲ್ಲೆಯಲ್ಲಿ ಯಾವುದೇ ಗ್ರಾಮ ಅಥವಾ ಪಟ್ಟಣದಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಿಲ್ಲ. ಆದರೆ ಮುನ್ನೆಚ್ಚರಿಕಾ ಕ್ರಮವಾಗಿ ಧಾರವಾಡ ತಾಲೂಕಿನ ಹೊಸಟ್ಟಿ, ಮಂಡಿಹಾಳ, ಬೇಲೂರ, ಮುಗದ ಗ್ರಾಮಗಳು, ಹುಬ್ಬಳ್ಳಿ ತಾಲೂಕಿನ ನೂಲ್ವಿ ಮತ್ತು ಅದರಗುಂಚಿ, ಕಲಘಟಗಿ ತಾಲೂಕಿನ ನೆಲ್ಲಿಹರವಿ ತಾಂಡಾ ಹಾಗೂ ಬಿ.ಹುಲಿಕಟ್ಟಿ ಗ್ರಾಮಗಳಲ್ಲಿ ಸೇರಿ ಒಟ್ಟು 8 ಗ್ರಾಮಗಳಿಗೆ ಖಾಸಗಿ ಬೋರ್‌ವೆಲ್‌ಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ.

ಜಿಲ್ಲೆಯಲ್ಲಿ ಒಟ್ಟು 395 ಗ್ರಾಮಗಳಿದ್ದು, ಬೇಸಿಗೆ ಅವಧಿಯಲ್ಲಿ ಸಮಸ್ಯೆ ಉಂಟಾದಲ್ಲಿ ತುರ್ತು ಕ್ರಮ ಕೈಗೊಳ್ಳಲು 186 ಖಾಸಗಿ ಕೊಳವೆಬಾವಿ ಮಾಲಿಕರೊಂದಿಗೆ ಮುಂಚಿತ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕುಡಿಯುವ ನೀರಿನ ಮೂಲಗಳಿಂದ ಮಾದರಿಗಳನ್ನು ಪರೀಕ್ಷಿಸಿ, ನೀರು ಕುಡಿಯಲು ಯೋಗ್ಯವಾಗಿರುವುದನ್ನು ಖಚಿತಪಡಿಸಿಕೊಳ್ಳಲು ಹಾಗೂ ಕಲುಷಿತ ನೀರು ಸರಬರಾಜಾಗದಂತೆ ಎಚ್ಚರಿಕೆ ವಹಿಸಲು ಸೂಚಿಸಲಾಗಿದೆ. ಜೊತೆಗೆ ಆರೋಗ್ಯ ಇಲಾಖೆ ಸಾಂಕ್ರಾಮಿಕ ರೋಗಗಳು ಹರಡದಂತೆ ಜನರಲ್ಲಿ ಜಾಗೃತಿ ಮೂಡಿಸಬೇಕೆಂದು ತಿಳಿಸಲಾಗಿದೆ. ಬೇಸಿಗೆ ಕಾಲದಲ್ಲಿ ನೀರಿನ ಬೇಡಿಕೆ ಹೆಚ್ಚಾಗುವ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ ಕುಡಿಯುವ ನೀರಿನ ಕೆರೆಗಳನ್ನು ಈಗಾಗಲೇ ತುಂಬಿಸಲಾಗಿದ್ದು, ಅವುಗಳನ್ನು ಕೃಷಿ ಅಥವಾ ಇತರ ಚಟುವಟಿಕೆಗಳಿಗೆ ಬಳಸದೇ ಸಂರಕ್ಷಿಸಲು ಸೂಚಿಸಲಾಗಿದೆ. ಪ್ರಾಣಿ-ಪಕ್ಷಿಗಳಿಗೆ ನೀರಿನ ಕೊರತೆ ಆಗದಂತೆ ಸಾರ್ವಜನಿಕ ಸ್ಥಳಗಳಲ್ಲಿ ನೀರಿನ ತಟ್ಟೆಗಳು ಅಥವಾ ಸಣ್ಣ ಟ್ಯಾಂಕ್ ವ್ಯವಸ್ಥೆಗಳನ್ನು ಮಾಡುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಇದುವರೆಗೆ ನೀರಿನ ಕೊರತೆ ಕಂಡುಬಂದಿಲ್ಲ ಎಂದು ತಿಳಿಸಿದರು.

### ಸಹಾಯವಾಣಿ ಸಂಖ್ಯೆ

ಕುಡಿಯುವ ನೀರು, ಮೇವು ಹಾಗೂ ಇತರ ವಿಪತ್ತು ಸಮಸ್ಯೆಗಳ ಕುರಿತು ಸಾರ್ವಜನಿಕರು ಸಂಪರ್ಕಿಸಲು ವಿವಿಧ ಇಲಾಖೆಗಳ ಸಹಾಯವಾಣಿ ಆರಂಭಿಸಲಾಗಿದೆ.

1) **ಜಿಲ್ಲಾಧಿಕಾರಿ ಕಚೇರಿ ವಿಪತ್ತು ನಿರ್ವಹಣಾ ಸಹಾಯವಾಣಿ: 0836-2445508**
2) **ಟೋಲ್ ಫ್ರೀ ಸಂಖ್ಯೆ: 1077**

ಅಣ್ಣಿಗೇರಿ, ನವಲಗುಂದ, ಅಳ್ನಾವರ, ಕಲಘಟಗಿ ಮತ್ತು ಕುಂದಗೋಳ ಪಟ್ಟಣ ಪಂಚಾಯತ್‌ಗಳ ಕಚೇರಿಗಳಲ್ಲಿಯೂ ಸಹಾಯವಾಣಿ ವ್ಯವಸ್ಥೆ ಮಾಡಲಾಗಿದೆ.

**ನರೇಗಲ್ಲ ಮಹಾವಿದ್ಯಾಲಯದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ; ವಿವಿಧ ಸ್ಪರ್ಧೆಗಳ ಆಯೋಜನೆ**

# ಎಲ್ಲ ರಂಗಗಳಲ್ಲಿ ಮಹಿಳೆಯ ಸಾಧನೆ ಗಮನಾರ್ಹ



"ಇಂದಿನ ಸಮಾಜದಲ್ಲಿ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿಯೂ ತಮ್ಮ ಸಾಮರ್ಥ್ಯವನ್ನು ತೋರಿಸುತ್ತಿದ್ದು, ಪುರುಷರಷ್ಟೇ ಸಮರ್ಥವಾಗಿ ಜವಾಬ್ದಾರಿಗಳನ್ನು ನಿರ್ವಹಿಸುತ್ತಿದ್ದಾರೆ."
– **ಬಿ.ಕೆ. ಸವಿತಕ್ಕ**

### ವಿವಿಧ ಸ್ಪರ್ಧೆಗಳ ಆಯೋಜನೆ

ಮಹಿಳಾ ದಿನಾಚರಣೆಯ ಅಂಗವಾಗಿ ರಂಗೋಲಿ, ಮೆಹೆಂದಿ, ಪೋಸ್ಟರ್ ಸ್ಪರ್ಧೆ, ಬ್ರೈಡಲ್ ಮೇಕಪ್ ಸೇರಿದಂತೆ ಹಲವು ಸ್ಪರ್ಧೆಗಳು ಆಯೋಜಿಸಲಾಯಿತು. ಸ್ಪರ್ಧೆಗಳಲ್ಲಿ ವಿಜೇತರಾದ ಮಹಿಳೆಯರಿಗೆ ಗಣ್ಯರು ಬಹುಮಾನ ವಿತರಿಸಿದರು.

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಂದಿನ ಕಾಲಘಟ್ಟದಲ್ಲಿ ಮಹಿಳೆ ಎಲ್ಲ ಕ್ಷೇತ್ರಗಳಲ್ಲಿಯೂ ತನ್ನ ಸಾಮರ್ಥ್ಯವನ್ನು ಸಾಬೀತುಪಡಿಸುತ್ತಿದ್ದು, ಸಮಾಜದ ಪ್ರತಿಯೊಂದು ರಂಗದಲ್ಲೂ ಸಮರ್ಥವಾಗಿ ಕಾರ್ಯನಿರ್ವಹಿಸುತ್ತಿದ್ದಾಳೆ ಎಂದು ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ. ಸವಿತಕ್ಕ ಹೇಳಿದರು.


ಪಟ್ಟಣದ ಶ್ರೀ ಅನ್ನದಾನೇಶ್ವರ ಕಲಾ, ವಿಜ್ಞಾನ, ವಾಣಿಜ್ಯ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಕೇಂದ್ರದಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಮಾಜದಲ್ಲಿ ಪುರುಷರಷ್ಟೇ ಸಮರ್ಪಕವಾಗಿ ಕಾರ್ಯಗಳನ್ನು ನಿರ್ವಹಿಸಬಲ್ಲೆ ಎಂಬುದನ್ನು ಮಹಿಳೆಯರು ಅನೇಕ ಉದಾಹರಣೆಗಳ ಮೂಲಕ ಸಾಬೀತುಪಡಿಸಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಮಾತನಾಡಿ, ಇಂದಿನ ಮಕ್ಕಳಲ್ಲಿ ಸಂಸ್ಕಾರಗಳ ಕೊರತೆ ಕಾಣಿಸುತ್ತಿದ್ದು, ಧಾರ್ಮಿಕ ಹಾಗೂ ಸಾಂಸ್ಕೃತಿಕ ಮೌಲ್ಯಗಳಲ್ಲಿ ಹಿಂದುಳಿಯುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಹೇಳಿದರು. ತಾಯಂದಿರು ತಮ್ಮ ಮಕ್ಕಳಿಗೆ ಆಚಾರ-ವಿಚಾರ ಹಾಗೂ ಸಂಪ್ರದಾಯಗಳ ಮಹತ್ವವನ್ನು ತಿಳಿಸಿಕೊಟ್ಟಲ್ಲಿ ಮುಂದಿನ ಪೀಳಿಗೆಗೆ ಸಂಸ್ಕಾರಗಳನ್ನು ಉಳಿಸಿಕೊಟ್ಟಂತಾಗುತ್ತದೆ. ಇದು ಮಹಿಳೆಯಿಂದ ಮಾತ್ರ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಐಕ್ಯೂಎಸಿ ಸಂಯೋಜಕ ಡಾ. ಡಿ.ಎಲ್. ಪವಾರ, ಮಹಾವಿದ್ಯಾಲಯದ ಮಹಿಳಾ ಸಬಲೀಕರಣ ಘಟಕದ ಅಧ್ಯಕ್ಷ ಡಾ. ಆರ್.ಆರ್. ಪಾಟೀಲ ಸೇರಿದಂತೆ ಸಿಬ್ಬಂದಿ ಉಪಸ್ಥಿತರಿದ್ದರು.

**ಎಪ್ರಿಲ್ 1ರಿಂದ 8, 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ಉಚಿತ ಟ್ಯೂಶನ್ – ಊಟ ಹಾಗೂ ವಸತಿ ವ್ಯವಸ್ಥೆ**

# ಅಣ್ಣಿಗೇರಿ ಗುರು ಆಶ್ರಮದಲ್ಲಿ ಉಚಿತ ಟ್ಯೂಶನ್



### ನೋಂದಣಿ ವಿವರಗಳು

ಸ್ಥಳ: ಬಿ.ಜಿ. ಅಣ್ಣಿಗೇರಿ ಗುರು ಆಶ್ರಮ, ಡಾ. ಪಂ. ಪುಟ್ಟರಾಜ ಗವಾಯಿಗಳ ಪುತ್ಥಳಿ ಹತ್ತಿರ (ಭೂಮರಡ್ಡಿ ಸರ್ಕಲ್), ಗದಗ ನೋಂದಣಿ ಕೊನೆಯ ದಿನಾಂಕ: ಮಾರ್ಚ್ 28. ಸಂಪರ್ಕ ಸಂಖ್ಯೆ: 9902652860, 8495877018, 8792683828, 9449048070,

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಪರಿಸರದಲ್ಲಿ ಕಳೆದ 60 ವರ್ಷಗಳಿಂದ ವಿದ್ಯಾರ್ಥಿಗಳಿಗೆ ಮೌಲ್ಯಯುತ ಶಿಕ್ಷಣ ನೀಡುತ್ತಿರುವ ಬಿ.ಜಿ. ಅಣ್ಣಿಗೇರಿ ಗುರುಗಳ ಶಿಕ್ಷಣ ಪರಂಪರೆಯನ್ನು ಮುಂದುವರಿಸಿ, ಅವರ ಶಿಷ್ಯ ಬಳಗವು ಗುರುಬಳಗ ಆಶ್ರಮದಲ್ಲಿ 8, 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ಉಚಿತ ಟ್ಯೂಶನ್ ಆರಂಭಿಸಲು ನಿರ್ಧರಿಸಿದೆ.

ಎಪ್ರಿಲ್ 1ರಿಂದ ಬೇಸಿಗೆ ಟ್ಯೂಶನ್ ವರ್ಗಗಳು ಆರಂಭವಾಗಲಿದ್ದು, ಪ್ರತಿದಿನ ಮೊದಲ ಬ್ಯಾಚ್ ಬೆಳಿಗ್ಗೆ 7 ಗಂಟೆಗೆ ಪ್ರಾರಂಭವಾಗುತ್ತದೆ. ವಿಶೇಷವಾಗಿ 8ನೇ ತರಗತಿಗೆ ಪ್ರವೇಶ ಪಡೆದ ಗ್ರಾಮೀಣ ಭಾಗದ ಆಯ್ದ 20 ಬಡ ವಿದ್ಯಾರ್ಥಿಗಳಿಗೆ 10ನೇ ತರಗತಿಯವರೆಗೆ ಉಚಿತ ಟ್ಯೂಶನ್, ಉಚಿತ ಊಟ ಮತ್ತು ಉಚಿತ ವಸತಿ ವ್ಯವಸ್ಥೆ ಕಲ್ಪಿಸಲಾಗುತ್ತದೆ.

ಅನುಭವಿಯ ಶಿಕ್ಷಕರ ತಂಡ ಈ ಟ್ಯೂಶನ್ ತರಗತಿಗಳನ್ನು ನಡೆಸಲಿದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಮಾರ್ಗದರ್ಶನ ನೀಡಲಿದೆ.

"ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆಯಬೇಕು ಎಂಬ ಉದ್ದೇಶದಿಂದ ಈ ಉಚಿತ ಟ್ಯೂಶನ್ ವ್ಯವಸ್ಥೆ ಆರಂಭಿಸಲಾಗಿದೆ." ಎಂದು ಆಶ್ರಮದ ಗುರುಬಳಗ ತಿಳಿಸಿದೆ.

# ಮಹಿಳಾ ಹಕ್ಕುಗಳಿಗಾಗಿ ಗದಗದಲ್ಲಿ ಜಾಗೃತಿ

▶▶ ಮೊದಲನೇ ಪುಟದಿಂದ

ಮೂಲಭೂತ ಹಕ್ಕುಗಳನ್ನು ಕಡಿಮೆ ಮಾಡುತ್ತಿದೆ," ಎಂದು ಸಮಿತಿಗಳು ಮನವಿ ಮಾಡಿದ್ದಾರೆ.

ಎಲ್ಲ ಮಹಿಳಾ ಉದ್ಯೋಗಿಗಳಿಗೆ ಕನಿಷ್ಠ ವೇತನ ಮತ್ತು ಸಮಾನ ವೇತನ ಜಾರಿಗೆ ತರುವಂತೆ, ಯಾವುದೇ ಯೋಜನಾ ಕೆಲಸಗಾರರನ್ನು ಅಧಿಕೃತ ಉದ್ಯೋಗಿಗಳಂತೆ ಗುರುತಿಸುವುದು, ಆರು ತಿಂಗಳಿಗೆ ಮಾತೃತ್ವ ರಜೆ, ಆರೈಕೆ ಕೊಠಡಿ ಹಾಗೂ ಶೌಚಾಲಯ ಸೌಲಭ್ಯ ಒದಗಿಸುವುದು, ತಿಂಗಳಿಗೆ ಎರಡು ದಿನ ಮುಟ್ಟಿನ ರಜೆ, ಪ್ರತ್ಯೇಕ ವಿರಾಮ ಕೊಠಡಿಗಳು, ಅಪಾಯಕಾರಿ ಹಾಗೂ ರಾತ್ರಿ ಕೆಲಸಗಳಲ್ಲಿ ಮಹಿಳೆ ಮತ್ತು ಮಕ್ಕಳನ್ನು ತೊಡಗಿಸುವುದನ್ನು ನಿಷೇಧಿಸಬೇಕು, ಮಹಿಳೆಯರು ಹಾಗೂ ಮಕ್ಕಳ ವಿರುದ್ಧ ದೌರ್ಜನ್ಯ ತಡೆಗೆ ತ್ವರಿತ ಕ್ರಮ ಜಾರಿಗೊಳಿಸಬೇಕು, ಪಡಿತರ ವ್ಯವಸ್ಥೆ, ಆರೋಗ್ಯ ಮತ್ತು ಶಿಕ್ಷಣಕ್ಕೆ ಅನುದಾನ ಹೆಚ್ಚಿಸುವಂತೆ, ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗ ಖಾತ್ರಿ ಯೋಜನೆ ಜಾರಿಗೆ ತರುವಂತೆ ಮನವಿ ಸಲ್ಲಿಸಲಾಯಿತು.

ಇದೇ ವೇಳೆ ನಗರದಲ್ಲಿ ವರ್ಷಕ್ಕೆ 200 ದಿನ, 600 ರೂ. ಕೂಲಿಗೆ ಉದ್ಯೋಗ ಖಾತ್ರಿ, ಗ್ರಾಮೀಣ ಮನರೇಗಾ ಯೋಜನೆ ಉಳಿಸುವುದು, ಮಹಿಳಾ ಕೂಲಿಕಾರ ವಿರೋಧಿ ನಿಯಮಗಳನ್ನು ಜಾರಿಗೆ ತರುವಂತೆ, ಅಂಗನವಾಡಿ, ಬಿಸಿಯೂಟ, ಆಶಾ ಕಾರ್ಯಕರ್ತರಿಗೆ ರಜೆ ಜಾರಿ ನೀಡುವಂತೆ ಮನವಿಯಲ್ಲಿ ಸೂಚಿಸಲಾಗಿದೆ.

# ಸಿಲಿಂಡರ್ ಕಾಳಸಂತೆ ವ್ಯವಹಾರಕ್ಕೆ ಕಡಿವಾಣ!

▶▶ ಮೊದಲನೇ ಪುಟದಿಂದ




ಬಳಸುವುದು ಹಾಗೂ ಅನಧಿಕೃತವಾಗಿ ಸಿಲಿಂಡರ್‌ಗಳನ್ನು ಸಂಗ್ರಹಿಸಿ ಒಂದು ಸಿಲಿಂಡರ್‌ನಿಂದ ಮತ್ತೊಂದಕ್ಕೆ ಅನಿಲ ವರ್ಗಾವಣೆ ಮಾಡುವುದು ಅಪರಾಧವಾಗಿದ್ದು, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಸಭೆಯಲ್ಲಿ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ, ಐಓಸಿ, ಬಿಪಿಸಿ, ಎಚ್‌ಪಿಸಿ ಕಂಪನಿಗಳ ಪ್ರತಿನಿಧಿಗಳು, ಹೋಟೆಲ್ ಮಾಲಿಕರು, ಸಂಘದ ಪದಾಧಿಕಾರಿಗಳು, ಗ್ಯಾಸ್ ವಿತರಕರು ಹಾಗೂ ಇಲಾಖೆಯ ಆಹಾರ ನಿರೀಕ್ಷಕರು ಉಪಸ್ಥಿತರಿದ್ದರು.

**ಸಾರ್ವಜನಿಕರಿಗೆ ಮನವಿ: ಬುಕ್ಕಿಂಗ್ ಮಾಡಿದ ಬಳಿಕ ನಿಗದಿತ ಅವಧಿ ಕಾಯಬೇಕು. ಗ್ಯಾಸ್ ಡೀಲರ್‌ಗಳ ಮೇಲೆ ಅನಗತ್ಯ ಒತ್ತಡ ಹಾಕಬಾರದು.**

## ಸಿಲಿಂಡರ್ ಬಿಕ್ಕಟ್ಟು: ಕೇಂದ್ರ ಸರ್ಕಾರದ ವಿರುದ್ಧ ಅಶೋಕ ಮಂದಾಲಿ ವಾಗ್ದಾಳಿ

■ ವಿಜಯಸಾಕ್ಷಿ ಸುದ್ದಿ, ಗದಗ



ಕೇಂದ್ರ ಬಿಜೆಪಿ ಸರ್ಕಾರದ ವೈಫಲ್ಯದಿಂದ ಎಲ್‌ಪಿಜಿ ಸಿಲಿಂಡರ್ ಬಿಕ್ಕಟ್ಟಿನ ಸುಳಿಯಲ್ಲಿ ದೇಶದ ಜನತೆ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಆರೋಪಿಸಿದರು.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಭಾರತದಲ್ಲಿ ವರ್ಷಕ್ಕೆ ಸುಮಾರು 31 ರಿಂದ 33 ಮಿಲಿಯನ್ ಮೆಟ್ರಿಕ್ ಟನ್ ಎಲ್‌ಪಿಜಿ ಬಳಕೆಯಾಗುತ್ತಿದ್ದು, ಅದರ ಬಹುಪಾಲು ಕತಾರ್, ಯುಎಇ, ಕುವೈತ್ ಹಾಗೂ ಸೌದಿ ಅರೇಬಿಯಾ ಸೇರಿದಂತೆ ವಿದೇಶಗಳಿಂದ ಆಮದು ಮಾಡಿಕೊಳ್ಳಲಾಗುತ್ತಿದೆ. ದೇಶದ ಒಟ್ಟು ಎಲ್‌ಪಿಜಿ ಬಳಕೆಯಲ್ಲಿ ಶೇ.87-88ರಷ್ಟು ಗೃಹ ಬಳಕೆ ಹಾಗೂ ಶೇ.1213ರಷ್ಟು ವಾಣಿಜ್ಯ ಬಳಕೆಯಾಗಿದೆ ಎಂದು ತಿಳಿಸಿದ್ದಾರೆ.

2011-12ರಲ್ಲಿ 15 ಮಿಲಿಯನ್ ಮೆಟ್ರಿಕ್ ಟನ್ ಇದ್ದ ಎಲ್‌ಪಿಜಿ ಬಳಕೆ 2024-25ರಲ್ಲಿ 31 ಮಿಲಿಯನ್ ಮೆಟ್ರಿಕ್ ಟನ್‌ಗೆ ಏರಿಕೆಯಾಗಿದ್ದು, ಆಮದು ಪ್ರಮಾಣವೂ ಗಣನೀಯವಾಗಿ ಹೆಚ್ಚಾಗಿದೆ. ದೇಶದಲ್ಲಿ ಎಲ್‌ಪಿಜಿ ಕೊರತೆ ಇಲ್ಲವೆಂದು ಹೇಳುತ್ತಿರುವ ಕೇಂದ್ರ ಸರ್ಕಾರ, ಬುಕಿಂಗ್ ನಡುವಿನ ಅವಧಿಯನ್ನು 21 ದಿನಗಳಿಂದ 25 ದಿನಗಳಿಗೆ ಹೆಚ್ಚಿಸುವ ಮೂಲಕ ವಾಸ್ತವ ಸ್ಥಿತಿಯನ್ನು ಮುಚ್ಚಿಹಾಕಲು ಪ್ರಯತ್ನಿಸುತ್ತಿದೆ ಎಂದು ಅವರು ಆರೋಪಿಸಿದರು.

ಇರಾನ್-ಇಸ್ರೇಲ್ ಯುದ್ಧದಿಂದ ಹಾರ್ಮುಜ್ ಜಲಸಂಧಿ ಮಾರ್ಗದಲ್ಲಿ ತೊಂದರೆ ಉಂಟಾಗಿ ಎಲ್‌ಪಿಜಿ ಪೂರೈಕೆಯಲ್ಲಿ ಶೇ.10-15ರಷ್ಟು ಕೊರತೆ ಉಂಟಾಗಿದೆ. ಇದರ ಪರಿಣಾಮವಾಗಿ ಅನೇಕ ಹೋಟೆಲ್‌ಗಳು ಸಂಕಷ್ಟ ಎದುರಿಸುತ್ತಿದ್ದು, ಇಂಡಕ್ಷನ್ ಹಾಗೂ ಎಲೆಕ್ಟ್ರಿಕ್ ಸ್ಟೋವ್ ಬಳಕೆ ಶೇ.25-30ರಷ್ಟು ಹೆಚ್ಚಾಗಿದೆ ಎಂದು ಹೇಳಿದರು.

ಇಂಡಕ್ಷನ್ ಬಳಕೆ ಹೆಚ್ಚಳದಿಂದ ವಿದ್ಯುತ್ ಬೇಡಿಕೆ ಏರಿಕೆಯಾಗುವ ಸಾಧ್ಯತೆ ಇದ್ದು, ಕೈಗಾರಿಕೆಗಳಿಗೆ ನೀಡುವ ವಿದ್ಯುತ್ ಪೂರೈಕೆಯಲ್ಲೂ ವ್ಯತ್ಯಯ ಉಂಟಾಗಬಹುದು. ಇದರಿಂದ ಉತ್ಪಾದನಾ ವೆಚ್ಚವೂ ಹೆಚ್ಚಾಗುವ ಸಾಧ್ಯತೆ ಇದೆ ಎಂದು ತಿಳಿಸಿದರು.

2026ರ ಜನವರಿಯಿಂದ ಮಾರ್ಚ್ ತನಕ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ ಹಲವು ಬಾರಿ ಹೆಚ್ಚಳಗೊಂಡಿದ್ದು, ಗೃಹ ಬಳಕೆ ಸಿಲಿಂಡರ್ ಬೆಲೆಯೂ 915 ರೂ. ತಲುಪಿದೆ. ನಿರಂತರ ಬೆಲೆ ಏರಿಕೆಯಿಂದ ಇದು ಶೀಘ್ರದಲ್ಲೇ 1000 ರೂ. ಗಡಿ ದಾಟುವ ಸಾಧ್ಯತೆ ಇದೆ ಎಂದು ಹೇಳಿದರು.

ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿಯಿಂದ ಜನಸಾಮಾನ್ಯರು ಸಂಕಷ್ಟಕ್ಕೀಡಾಗಿದ್ದು, ರಾಜ್ಯ ಕಾಂಗ್ರೆಸ್ ಸರ್ಕಾರದ ಗೃಹಲಕ್ಷ್ಮಿ ಯೋಜನೆಯಡಿ ನೀಡುತ್ತಿರುವ ತಿಂಗಳಿಗೆ 2000 ರೂ. ನೆರವು ಜನರಿಗೆ ಸಹಾಯಕವಾಗಿದೆ ಎಂದು ಅವರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ನಿರಂತರ ಬೆಲೆ ಏರಿಕೆ ನೀತಿಯಿಂದ ಜನರ ಖರೀದಿಶಕ್ತಿ ಕುಗ್ಗಿದ್ದು, ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕ ಹೆಚ್ಚಳವೂ ಜನರ ಬದುಕಿಗೆ ಮತ್ತಷ್ಟು ಭಾರವಾಗಿದೆ ಎಂದು ಅಶೋಕ ಮಂದಾಲಿ ವಾಗ್ದಾಳಿ ನಡೆಸಿದರು.

## ನಿಜಶರಣ ಅಂಬಿಗೇರ ಚೌಡಯ್ಯನವರ ಪತ್ತಿನ ಸಹಕಾರಿ ಸಂಘ ಸ್ಥಾಪನೆ: ಅಧ್ಯಕ್ಷರಾಗಿ ಸಂಗಮೇಶ ಹಾದಿಮನಿ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ





ಗದಗ-ಬೆಟಗೇರಿ ಅವಳಿ ನಗರದಲ್ಲಿ ಹೊಸದಾಗಿ ಶ್ರೀ ನಿಜಶರಣ ಅಂಬಿಗೇರ ಚೌಡಯ್ಯನವರ ಪತ್ತಿನ ಸಹಕಾರಿ ಸಂಘ ಸ್ಥಾಪನೆಯಾಗಿದ್ದು, ಸಂಘದ ಅಧ್ಯಕ್ಷರಾಗಿ ಸಂಗಮೇಶ ಹಾದಿಮನಿ, ಉಪಾಧ್ಯಕ್ಷರಾಗಿ ಹರೀಶ ಬಾರಕೇರ, ಗೌರವಾಧ್ಯಕ್ಷರಾಗಿ ದೇವಪ್ಪ ಕಟ್ಟಿಮನಿ, ನಿರ್ದೇಶಕರಾಗಿ ಮಂಜುನಾಥ ಗುಡಿಸಾಗರ, ಚಂದ್ರಶೇಖರ ಬಾರಕೇರ, ಮಧುಶೇಖರ ಪೂಜಾರ, ರವಿಕುಮಾರ ಗುಡಿಸಾಗರ, ಶೇಖವ್ವ ಬಾರಕೇರ, ಬಸವರಾಜ ಮೊಕಾಶಿ, ಸೋನಿಯಾ ನಿಡಗುಂದಿ, ರಾಜು ಪೂಜಾರ, ಲಕ್ಷ್ಮೀ ಬಾರಕೇರ, ಅಮಿತ ಪೂಜಾರ ಹಾಗೂ ಕಾರ್ಯನಿರ್ವಾಹಕರಾಗಿ ಶ್ರೀಮತಿ ಭುವನೇಶ್ವರಿ ಹಾದಿಮನಿ ಆಯ್ಕೆಯಾಗಿದ್ದಾರೆ.

ಸಮಾಜ ಕಾರ್ಯಕರ್ತ ಸಂಗಮೇಶ ಹಾದಿಮನಿ ಎಲ್ಲಾ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿ ಮಾತನಾಡಿ, ಅವಳಿ ನಗರದಲ್ಲಿ 12ನೇ ಶತಮಾನದ ಶರಣರ ಹೆಸರಿನಲ್ಲಿ ಸಹಕಾರಿ ಸಂಘ ಸ್ಥಾಪನೆಯಾಗಿರುವುದು ಸಂತಸದ ವಿಚಾರವಾಗಿದೆ.

ಸಂಘವು ಸಮುದಾಯದ ಬಾಂಧವರು, ಗೆಳೆಯರ ಬಳಗ ಮತ್ತು ಸಣ್ಣ ಉದ್ಯಮದಾರರು ಸೇರಿದಂತೆ ಎಲ್ಲ ವರ್ಗದ ಕಡುಬಡವರಿಗೂ ಸದಸ್ಯತ್ವ ನೀಡಲು ತೆರೆಯಲಾಗಿದೆ ಎಂದರು. ಸದಸ್ಯರಿಗೆ ಆರ್ಥಿಕ ಸಬಲೀಕರಣಕ್ಕೆ ಉತ್ತಮ ವೇದಿಕೆ ನೀಡುವಂತೆ ಸಂಸ್ಥೆ ವಿನ್ಯಾಸಗೊಳ್ಳಲಾಗಿದೆ ಎಂದು ಹೇಳಿದರು.

ಈ ಮೂಲಕ ಸ್ಥಳೀಯ ಸಣ್ಣ ಉದ್ಯಮ ಮತ್ತು ಸಮುದಾಯದ ಅಭಿವೃದ್ಧಿಗೆ ಸಹಕಾರಿ ಸಂಘ ಒತ್ತಾಯಪೂರ್ವಕ ವೇದಿಕೆಯಾಗಿ ಕಾರ್ಯನಿರ್ವಹಿಸಲಿದೆ ಎಂದು ತಿಳಿಸಿದರು.

## ಮಾ.17ರಂದು ಅಗ್ನಿಬನ್ನಿರಾಯ ಜಯಂತಿ: ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ತಾಲೂಕು ಆಡಳಿತದಿಂದ ಶ್ರೀ ಅಗ್ನಿಬನ್ನಿರಾಯ ಜಯಂತಿ ಆಚರಣೆ ಹಿನ್ನೆಲೆಯಲ್ಲಿ ಮಾ.17ರಂದು ಸಂಜೆ 4ಕ್ಕೆ ತಹಶೀಲ್ದಾರ ಕಾರ್ಯಾಲಯದ ಸಭಾಭವನದಲ್ಲಿ ಪೂರ್ವಭಾವಿ ಸಭೆ ನಡೆಯಲಿದೆ. ತಾಲೂಕು ಮಟ್ಟದ ಅಧಿಕಾರಿಗಳು, ಸಮಾಜದ ಮುಖಂಡರು ಹಾಗೂ ವಿವಿಧ ಸಂಘಗಳ ಪದಾಧಿಕಾರಿಗಳು ಸಭೆಗೆ ಹಾಜರಾಗಬೇಕೆಂದು ಪ್ರಕಟಣೆ ತಿಳಿಸಿದೆ.

## ಮಾ.17ರಂದು ದೇವರ ದಾಸಿಮಯ್ಯ ಜಯಂತಿ: ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ತಾಲೂಕು ಆಡಳಿತದಿಂದ ಶ್ರೀ ದೇವರ ದಾಸಿಮಯ್ಯ ಜಯಂತಿ ಆಚರಣೆ ಸಂಬಂಧ ಪೂರ್ವಭಾವಿ ಸಭೆಯನ್ನು ಮಾ.17ರಂದು ಸಂಜೆ 4.30ಕ್ಕೆ ತಹಶೀಲ್ದಾರರ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ. ಅಧಿಕಾರಿಗಳು, ಸಮಾಜದ ಮುಖಂಡರು ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಭೆಗೆ ಹಾಜರಾಗಬೇಕೆಂದು ತಹಶೀಲ್ದಾರರು ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka